ಸಂಪುಟ : 10 ಸಂಚಿಕೆ 12 ಪುಟ : 4+2 ಬೆಲೆ: 3.00 ಶುಕ್ರವಾರ ಫೆಬ್ರವರಿ 7 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 12 Pages : 4+2 Price : 3.00 Friday February 7 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## 'ಬೇಂದ್ರೆ' ಗಾನಯಾನ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕ, ಶಾಲಾ ಘಟಕದ ಸಹಯೋಗದಲ್ಲಿ ಪಟ್ಟಣದ ದಿ ಯುನಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಫೆ.7ರಂದು ಮಧ್ಯಾಹ್ನ 3ಕ್ಕೆ ವರಕವಿ ದ.ರಾ ಬೇಂದ್ರೆ ಅವರ 130ನೇ ಜನ್ಮದಿನದ ಪ್ರಯುಕ್ತ ಬೇಂದ್ರೆ ಗಾನಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ದ.ರಾ. ಬೇಂದ್ರೆ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ರಾಮಗಿರಿ ಸಂಸ್ಥಾಪಕ ಅಧ್ಯಕ್ಷರಾದ ಡಾ. ಎಸ್.ವಿ. ತಮ್ಮನಗೌಡ್ರ ಮತ್ತು ಮುಖ್ಯೋಪಾಧ್ಯಾಯ ಅರವಿಂದ ದೇಶಪಾಂಡೆ ಕಾರ್ಯಕ್ರಮ ಉದ್ಘಾಟಿಸುವರು.

ಸಾಹಿತಿ ರಮೇಶ ನವಲೆ ಆಶಯ ಗಾನ ನುಡಿಯುವರು. ದಿಗಂಬರ ಪೂಜಾರ, ನಾಗರಾಜ ಹಣಗಿ, ಕರಿಯಪ್ಪ ಶಿರಹಟ್ಟಿ ಮತ್ತು ಕಸಾಪ ಪದಾಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿರುವರು. ಮಲ್ಲು ಕಳಸಾಪುರ, ಸಂತೋಷ ಗುಡಗೇರಿ, ನಾಗವೇಣಿ ಅಂಬಿಗೇರ ಬೇಂದ್ರೆ ಕವನಗಳನ್ನು ಹಾಡುವರು. ಕಸಾಪ ತಾಲೂಕಾ ಅಧ್ಯಕ್ಷ ಈಶ್ವರ ಮೆಡ್ಲೇರಿ ಅಧ್ಯಕ್ಷತೆ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಶ್ರೀ ವೀರಪ್ಪಜ್ಜನವರ ಜಾತ್ರೆಯಲ್ಲಿ ಸಾಮೂಹಿಕ ವಿವಾಹ । ನವಜೀವನಕ್ಕೆ ಕಾಲಿಟ್ಟ 5 ಜೋಡಿ

# ಶ್ರೀ ವೀರಪ್ಪಜ್ಜನವರು ನಮ್ಮೆಲ್ಲರ ಬಾಳಿನ ಬೆಳಕು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆ ಶತಮಾನೋತ್ಸವದ ನಿಮಿತ್ತ ನಡೆದಿರುವ ಅನೇಕ ಧಾರ್ಮಿಕ ಕಾರ್ಯಗಳಲ್ಲಿ ಗುರುವಾರ ಬೆಳಿಗ್ಗೆ 5 ಜೊತೆ ಸಂಪೂರ್ಣ ಉಚಿತ ಸಾಮೂಹಿಕ ವಿವಾಹಗಳು ಜರುಗಿದವು.

ವಿವಾಹ ಮಹೋತ್ಸವದ ದಿವ್ಯ ಸಾನ್ನಿಧ್ಯವನ್ನು ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ವಹಿಸಿದ್ದರು. ಸಾನ್ನಿಧ್ಯ ವಹಿಸಿದ್ದ ಹೆಬ್ಬಳ್ಳಿ ಚೈತನ್ಯಾಶ್ರಮದ ಶ್ರೀ ದತ್ತಾವಧೂತ ಮಹಾರಾಜರು ಆಶೀರ್ವಚನ ನೀಡಿ, ಸಾಧು-ಸಂತರನ್ನು ಎಂದಿಗೂ ಪ್ರಾಪಂಚಿಕ ದೃಷ್ಟಿಯಿಂದ ನೋಡಬಾರದು. ಹಠಯೋಗಿಗಳು, ಸಾಧುಗಳು ನಿರಂತರವಾದ ಆತ್ಮಾನುಸಂಧಾನದಲ್ಲಿದ್ದು ದೇಹಭಾವದಿಂದ ಸಂಪೂರ್ಣ ದೂರವಾಗಿರುತ್ತಾರೆ. ಅವರು ತಮ್ಮ ಅಂತರಂಗದಲ್ಲಿ ಯಾವಾಗಲೂ ಭಗವಂತನ ಅನುಸಂಧಾನದಲ್ಲಿ ಇರುತ್ತಾರೆ. ಇಂತಹ ವಿಶೇಷ ಗುಣವನ್ನು ಹೊಂದಿದ್ದವರು ಶ್ರೀ



ವೀರಪ್ಪಜ್ಜನವರು. ಅವರಲ್ಲಿನ ಹಠಯೋಗದ ವಿಶೇಷ ಗುಣ ನಮ್ಮೆಲ್ಲರ ಬಾಳಿಗೆ ಬೆಳಕಾಗಿದೆ ಎಂದು ದತ್ತಾವಧೂತರು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ಹಂಪಸಾಗರದ ಶ್ರೀ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯರು ಆಶೀರ್ವಚನ ನೀಡಿ, ದುಂದು ವೆಚ್ಚಗಳನ್ನು ಕಡಿತಗೊಳಿಸುವಲ್ಲಿ ಸಾಮೂಹಿಕ ವಿವಾಹಗಳು ನೆರವಾಗಿವೆ. ಇಂದು ದಾಂಪತ್ಯದ ಜೀವನಕ್ಕೆ ಕಾಲಿಟ್ಟ ನೀವು ಸಂಪೂರ್ಣವಾದ ಹೊಂದಾಣಿಕೆಯಿಂದ

> ಯಾವುದೇ ಸತ್ಪುರುಷರು ಇದ್ದಾಗ ಏನು ಸಮಾಜದ ಕಾರ್ಯ ಮಾಡುತ್ತಾರೋ, ಅವರು ದೇಹ ಬಿಟ್ಟ ನಂತರ ಅದಕ್ಕಿಂತಲೂ ಹೆಚ್ಚಿನ ಕಾರ್ಯವನ್ನು ಮಾಡುತ್ತಾರೆ. ಅದಕ್ಕೆ ಈಗ ಗದ್ದುಗೆ ರೂಪದಲ್ಲಿರುವ ಶ್ರೀ ವೀರಪ್ಪಜ್ಜನವರೇ ಸಾಕ್ಷಿ. ಸಮಾಜದಲ್ಲಿನ ಸತ್ಪುರುಷರಿಂದ ಮಾತ್ರ ಸಮಾಜ ಸುಧಾರಣೆ ಸಾಧ್ಯವೇ ಹೊರತು, ಅಧಿಕಾರಿಗಳಿಂದಾಗಲಿ, ರಾಜಕಾರಣಿಗಳಿಂದಾಗಲಿ ಸಮಾಜ ಸುಧಾರಣೆ ಸಾಧ್ಯವಿಲ್ಲ. ಇಂದು ಮದುವೆಯಾದ ನವ ದಂಪತಿಗಳು ಎಂತಹುದೇ ಕಷ್ಟ ಬಂದರೂ ಹೊಂದಾಣಿಕೆಯಿಂದ ಬದುಕನ್ನು ಸಾಗಿಸಿ ಜೀವನ ಸಾರ್ಥಕ ಮಾಡಿಕೊಳ್ಳಬೇಕೆಂದು ಹೆಬ್ಬಳ್ಳಿ ಚೈತನ್ಯಾಶ್ರಮದ ಶ್ರೀ ದತ್ತಾವಧೂತ ಮಹಾರಾಜರು ನವ ದಂಪತಿಗಳನ್ನು ಆಶೀರ್ವದಿಸಿದರು.

ಜೀವನ ನಡೆಸಿ ಒಬ್ಬರನ್ನೊಬ್ಬರು ಅರ್ಥ ಮಾಡಿಕೊಂಡು ಬದುಕನ್ನು ಸಾಗಿಸಬೇಕು. ಶ್ರೀ ವೀರಪ್ಪಜ್ಜನವರ ಕೃಪಾಶೀರ್ವಾದದಲ್ಲಿ ನೀವು ಮದುವೆಯಾಗಿದ್ದೀರಿ. ನಿಮ್ಮ ದಾಂಪತ್ಯ ಜೀವನ ಇತರರಿಗೆ ಮಾದರಿಯಾಗಿರುವಂತೆ ನಡೆದುಕೊಳ್ಳಬೇಕೆಂದರು.

ನಿಮ್ಮ ಮನೆಯಲ್ಲಿ ಮದುವೆ ಮಾಡಿಕೊಂಡಿದ್ದರೆ ಇಷ್ಟೊಂದು ಸ್ವಾಮೀಜಿಗಳು, ಸಾರ್ವಜನಿಕರು ಆಶೀರ್ವದಿಸುತ್ತಿದ್ದರೋ ಇಲ್ಲವೋ. ಆದರಿಲ್ಲಿ ಇಡೀ ಸಮುದಾಯವೇ ನಿಮಗೆ ಆಶೀರ್ವದಿಸಿದೆ ಎಂದರು.

ವೇದಿಕೆಯ ಮೇಲೆ ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಸ್ವಾಮೀಜಿ, ಪ್ರವಚನಕಾರ ಡಾ. ವಿಶ್ವನಾಥ ಸ್ವಾಮೀಜಿ, ಮೈನಳ್ಳಿ-ಬಿಸರಳ್ಳಿಯ ಶ್ರೀ ಸಿದ್ದೇಶ್ವರ ಶಿವಾಚಾರ್ಯರು, ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ, ಎಂ.ಸಿ. ಚಪ್ಪನ್ನಮಠ, ಬಸವರಾಜ ದಿಂಡೂರ ಇನ್ನೂ ಮುಂತಾದವರು ಉಪಸ್ಥಿತರಿದ್ದರು.

ಆಕಾಶವಾಣಿ ಕಲಾವಿದ ವೆಂಕಟೇಶ ಕುಲಕರ್ಣಿ ಸಂಗೀತ ಸೇವೆ ನೀಡಿದರು. ಶಿಕ್ಷಕ ಸುರೇಶ ಹಳ್ಳಿಕೇರಿ ಸ್ವಾಗತಿಸಿ, ನಿರೂಪಿಸಿದರು.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ಫೆಬ್ರವರಿ 8 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಈ ಕೆಳಗಿನಂತಿದೆ.

ಫೆಬ್ರವರಿ 8 ರಂದು ಬೆಳಿಗ್ಗೆ 10 ಗಂಟೆಗೆ ಗದಗ ನಗರದ ಎಸ್ ಬಿ ಎಸ್ ಬಡಾವಣೆಯ ಶ್ರೀ ಮಹಾಗಣಪತಿ ದೇವಸ್ಥಾನದ ಆವರಣದಲ್ಲಿ ಶ್ರೀ ಮಹಾಗಣಪತಿ ಸಭಾಭವನ ಉದ್ಘಾಟನೆ ಮತ್ತು ಶ್ರೀ ಮಹಾಗಣಪತಿ ದೇವಸ್ಥಾನದ 7ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ನಂತರ ಬೆಳಗ್ಗೆ 10:20 ಕ್ಕೆ ರಸ್ತೆ ಮೂಲಕ ಕೊಪ್ಪಳ ಜಿಲ್ಲೆಗೆ ಪ್ರಯಾಣಿಸುವರು ಎಂದು ಸಚಿವರ ಕಚೇರಿಯು ಪ್ರಕಟಣೆ ತಿಳಿಸಿದೆ.

### ಚಿಕೇನಕೊಪ್ಪದ ಚನ್ನವೀರಶರಣರ 30ನೇ ಪುಣ್ಯಸ್ಮರಣೋತ್ಸವ ಜಾತ್ರಾ ಮಹೋತ್ಸವ

# ಪ್ರವಚನದಿಂದ ವ್ಯವಸ್ಥಿತ ಸಮಾಜ ನಿರ್ಮಾಣ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ ಮಠದಲ್ಲಿ ಚನ್ನವೀರಶರಣರ 30ನೇ ಪುಣ್ಯ ಸ್ಮರಣೋತ್ಸವ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಮಹಾತ್ಮರ ಜೀವನ ದರ್ಶನ ಪ್ರವಚನದ ಮಂಗಲೋತ್ಸವ ಜರುಗಿತು.

ಸನ್ನಿಧಾನ ವಹಿಸಿದ ಹೂವಿನಹಡಗಲಿ ಗವಿಮಠದ ಮ.ನಿ.ಪ್ರ. ಡಾ. ಹಿರಿಯ ಶಾಂತವೀರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಸಮಾಜದಲ್ಲಿ ಮೊಬೈಲ್ ಹಾವಳಿಯಿಂದ ಒಳ್ಳೆಯ ಮಾತು ಕೇಳಲು, ಮಾತನಾಡಲು ಹಾಗೂ ಒಳ್ಳೆಯ ಕೆಲಸಕ್ಕೆ ಸಮಯವಿಲ್ಲದಂತಾಗಿದೆ. ಸಾಮಾಜಿಕ ಜಾಲತಾಣದಿಂದ ನಮ್ಮತನವನ್ನು ಕಳೆದುಕೊಳ್ಳುತ್ತಿರುವುದು ವಿಷಾದಕರ. ಮೊದಲು ಮನೆ ಚಿಕ್ಕದಾಗಿದ್ದವು, ಈಗ ಮನೆಗಳು ದೊಡ್ಡದಾಗಿವೆ. ಆದರೆ, ಮನಸ್ಸು ಚಿಕ್ಕದಾಗುತ್ತಿರುವುದು ವಿಪರ್ಯಾಸವಾಗಿದೆ. ಮನುಷ್ಯನನ್ನು ಎತ್ತರಕ್ಕೆ ಒಯ್ಯಲು ಗುರುನಿಷ್ಠೆ, ಶ್ರದ್ಧೆ ವಿಶ್ವಾಸ, ಬಂಧುತ್ವ, ಪ್ರೇಮತ್ವ ಮುಖ್ಯವಾಗಿದೆ. ಇಂತಹ ಎಲ್ಲ ಅಂಶಗಳನ್ನು ಶ್ರೀ ಶಿವಶಾಂತವೀರ ಶರಣರಲ್ಲಿ ಕಾಣುತ್ತೇವೆ ಎಂದರು.

ವಿಧಾನಪರಿಷತ ಸದಸ್ಯ ಎಸ್.ವ್ಹಿ. ಸಂಕನೂರ ಮಾತನಾಡಿ, ಮಹಾತ್ಮರ ಪ್ರವಚನವು, ಭಕ್ತರಿಗೆ ಸರಿಯಾದ ಮಾರ್ಗಕ್ಕೆ ತರುವುದಾಗಿದೆ. ಪ್ರವಚನದಿಂದ ವ್ಯವಸ್ಥಿತ ಸಮಾಜ ನಿರ್ಮಾಣ ಮಾಡಲು



ಸಹಾಯಕವಾಗಿದೆ. ಇಂತಹ ಪವಿತ್ರ ಕಾರ್ಯಕ್ರಮವದಲ್ಲಿ ಭಾಗವಹಿಸುವುದರಿಂದ ಸಮಾಜದಲ್ಲಿ ಯಾವ ರೀತಿ ಬದುಕಬೇಕೆಂದನ್ನು ತಿಳಿಯುವುದರ ಜೊತೆಗೆ ಮಾನಸಿಕ ನೆಮ್ಮದಿ ಲಭ್ಯವಾಗುತ್ತದೆ. ಅಧಿಕಾರ, ಆಸ್ತಿ, ಶ್ರೀಮಂತಿಕೆ ಇದ್ದರೂ ಸಹ ಮಾನಸಿಕ ನೆಮ್ಮದಿ ಇಲ್ಲದಿದ್ದರೆ ಮನುಷ್ಯನ ಜೀವನ ವ್ಯರ್ಥ. ಜೀವನದ ಸಾರ್ಥಕತೆ ಪಡೆಯಲು ಜೀವನ ದರ್ಶನ, ಪ್ರವಚನ ಮಾರ್ಗದರ್ಶನ ನೀಡುತ್ತದೆ ಎಂದರು.

ಮಾಜಿ ಸಚಿವ ಅಲ್ಲಂ ವೀರಭದ್ರಪ್ಪ ಮಾತನಾಡಿ, ಚನ್ನವೀರಶರಣರ ಸಾಮಾಜಿಕ ಕಳಕಳಿಯನ್ನು, ಅವರ ಅಂತಃಕರಣವನ್ನು ನೆನೆದು ಪ್ರಸ್ತುತ ಶ್ರೀಗಳ ಸಮಾಜಮುಖಿ ಕಾರ್ಯಗಳನ್ನು ಹಾಗೂ ಶರಣರ ಒಡನಾಟವನ್ನು ಸ್ಮರಿಸಿದರು.

ಇದೇ ಸಂದರ್ಭದಲ್ಲಿ ಕೀರ್ತಿ ಉಮೇಶ ಚಟ್ರಿ ಇವಳಿಂದ ಭರತ ನಾಟ್ಯ ಪ್ರದರ್ಶನ ಜರುಗಿತು. ನಾಡಿನ ಹೆಸರಾಂತ ಅನುಭಾವಿಗಳಾದ ಮುದಗಲ್ಲ ಮಹಾಂತೇಶ್ವರ ಮಠದ ಕಲ್ಯಾಣ ಆಶ್ರಮದ ಪೂಜ್ಯ ಮಹಾಂತ ಸ್ವಾಮಿಗಳಿಂದ ಪ್ರವಚನದ ಮಂಗಲದ ನುಡಿ ಸೇವೆ ಜರುಗಿತು.

ಶಂಕ್ರಯ್ಯ ಆರ್.ಗುರುಮಠ ಸಂಗೀತ, ಹೇಮಂತಕುಮಾರ ಹಿರೇಮಠ ತಬಲಾಸಾಥ, ವಿದ್ವಾನ್ ರವಿಕುಮಾರ ಅವರಿಂದ ವಾಯೋಲಿನ್ ವಾದನ ಜರುಗಿ-ತು. ಸದ್ಭಕ್ತರಿಂದ ಶಿವಶಾಂತವೀರ ಶರಣರಿಂದ ತುಲಾಭಾರ ಜರುಗಿತು. ಪ್ರಾಚಾರ್ಯ ಎಚ್.ಬಿ. ಯಲಬುರ್ಗಿ, ಸುನಂದಾ ಅಲ್ಲಂ ವೇದಿಕೆಯಲ್ಲಿದ್ದರು.

ಎಸ್.ಎಸ್. ಪುರಾಣಿಕಮಠ ಸ್ವಾಗತಿಸಿದರು. ಶಿವಲಿಂಗಯ್ಯಶಾಸ್ತ್ರಿ ಸಿದ್ದಾಪೂರ ನಿರೂಪಿಸಿದರು. ಶಿವು ಗಣಾಚಾರಿ ವಂದಿಸಿದರು.

> ಜೀವನದಲ್ಲಿ ದೀನದಲಿತರ, ಬಡವರ, ಅವಕಾಶ ವಂಚಿತರ ಉಪಕಾರ ಮಾಡಿ, ಕಣ್ಣೀರು ಒರೆಸುವ ಕೆಲಸ ಮಾಡಿ, ನಾವು ಬದುಕಲು ಜೊತೆಗೆ ನಮ್ಮವರನ್ನು ಬದುಕಿಸುವುದು ಎಂಬ ಸಮಷ್ಟಿ ಪ್ರಜ್ಞೆಯನ್ನು ಶ್ರೀಮಠ ಮತ್ತು ಶ್ರೀಗಳು ಮಾಡುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ. ಶಿವಶಾಂತವೀರ ಶರಣರು ಗ್ರಾಮೀಣ ಭಾಗದಲ್ಲಿ ಶಿಕ್ಷಣದ ಮಹತ್ವದ ಅರಿತು ಶೈಕ್ಷಣಿಕ ಸಂಸ್ಥೆಯ ಮೂಲಕ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ಶಿಕ್ಷಣದ ಮೂಲಕ ಕೈಗೆ ಕೆಲಸ, ಹೊಟ್ಟೆಗೆ ಅನ್ನ ನೀಡುವ ಔದ್ಯೋಗಿಕ ಶಿಕ್ಷಣ ನೀಡುತ್ತಿದ್ದಾರೆ. ಬಡವರ, ರೈತರ, ಕಾರ್ಮಿಕರ, ಹಿಂದುಳಿದ ಮಕ್ಕಳ ಉದ್ಧಾರಕ್ಕಾಗಿ ಶ್ರಮಿಸುತ್ತಿರುವುದು ಅಭಿನಂದನೀಯ ಎಂದು ವಿ.ಪ ಸದಸ್ಯ ಎಸ್.ವಿ. ಸಂಕನೂರ ನುಡಿದರು.

### ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ದಿನಾಂಕವನ್ನು ನಿಗದಿಪಡಿಸಲು ಮನವಿ

# ಲಿಖಿತ ಮಾಹಿತಿ ಒದಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ - ಬೆಟಗೇರಿ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಗೆ ಹೈಕೋರ್ಟ್ ಸಮ್ಮತಿ ನೀಡಿದ್ದರಿಂದ ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ದಿನಾಂಕವನ್ನು ನಿಗದಿಪಡಿಸಿರುವ ಬಗ್ಗೆ ಲಿಖಿತ ಮಾಹಿತಿ ಒದಗಿಸುವಂತೆ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ನೇತೃತ್ವದಲ್ಲಿ ಬಿಜೆಪಿ ಪಕ್ಷದ ನಗರಸಭೆ ಸದಸ್ಯರು, ಮುಖಂಡರು ಗದಗ ಉಪವಿಭಾಗಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು. ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರುಡಗಿ ಮಾತನಾಡಿ, ದಿನಾಂಕ 09/01/2025ರಂದು ಹೈಕೋರ್ಟ್‌ನ ದೃಢೀಕೃತ ಆದೇಶದೊಂದಿಗೆ ಅರ್ಜಿ ಸಲ್ಲಿಸಲಾಗಿತ್ತು.

ಆದರೆ ಈ ಬಗ್ಗೆ ವಿನಾಕಾರಣ ವಿಳಂಬ ಮಾಡುತ್ತಿದ್ದು ಮೇಲ್ನೋಟಕ್ಕೆ ಕಂಡುಬರುತ್ತಿದೆ. ಹೈಕೋರ್ಟ್‌ನಲ್ಲಿದ್ದ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆಗೆ ಸಂಬಂಧಿಸಿದಂತೆ 18 ಪ್ರಕರಣಗಳಲ್ಲಿ ಸರಿ ಸುಮಾರು



17 ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆ ಪ್ರಕ್ರಿಯೆ ಪೂರ್ಣಗೊಂಡಿದೆ. ಆದರೆ ನಗರಸಭೆಯ ಸದರಿ ಚುನಾವಣೆಯ ಚುನಾವಣಾಧಿಕಾರಿಯಾಗಿರುವ ತಾವು ಸೂಕ್ತ ಕ್ರಮ ಜರುಗಿಸದೆ, ದಿನಾಂಕವನ್ನು ನಿಗದಿಪಡಿಸದೆ ಸದಸ್ಯರ ಹಕ್ಕು-ಕರ್ತವ್ಯಕ್ಕೆ ಚ್ಯುತಿ ಬರುವಂತೆ ನಡೆದುಕೊಳ್ಳುತ್ತಿರುವುದು ಜನಪ್ರತಿನಿಧಿಗಳಿಗೆ ಅವಮಾನಿಸಿದಂತಾಗುತ್ತಿದೆ ಎಂದರು.

ಮನವಿ ಸ್ವೀಕರಿಸಿದ ಉಪವಿಭಾಗಾಧಿಕಾರಿಗಳು, ಈ ಪ್ರಕರಣದ ಬಗ್ಗೆ ಕಾನೂನಿನನ್ವಯ ನಿಗದಿತ ಸಮಯದಲ್ಲಿ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಎಂ.ಎಸ್. ಕರಿಗೌಡ್ರ, ನಗರಸಭೆ ಹಿರಿಯ ಸದಸ್ಯರಾದ ವಿನಾಯಕ ಮಾನ್ವಿ, ಅನಿಲ ಅಬ್ಬಿಗೇರಿ, ಮುತ್ತು ಮುಶಿಗೇರಿ, ಚಂದ್ರು ತಡಸದ, ನಾಗರಾಜ ತಳವಾರ, ಮಹಾಂತೇಶ ಶಲವಡಿ, ಉಷಾ ಮಹೇಶ ದಾಸರ, ವಿದ್ಯಾವತಿ ಗಡಗಿ, ಲಕ್ಷ್ಮೀ ಕಾಕಿ, ರಾಘು ಯಳವತ್ತಿ, ಪ್ರಕಾಶ ಅಂಗಡಿ, ಸುಧೀರ ಕಾಟಿಗರ, ಬಿಜೆಪಿ ಕಾರ್ಯಕರ್ತರಾದ ಮಹೇಶ ದಾಸರ, ಪ್ರಶಾಂತ ನಾಯ್ಕರ, ರಮೇಶ ಸಜ್ಜಗಾರ ಸೇರಿದಂತೆ ಬಿಜೆಪಿ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ತುಂಗ-ಭದ್ರಾ ನದಿಗೆ ನೀರು ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿಜಯನಗರ ಜಿಲ್ಲೆ, ಹೂವಿನಹಡಗಲಿ ತಾಲೂಕು, ಮೈಲಾರ ಗ್ರಾಮದ ಶ್ರೀ ಮೈಲಾರಲಿಂಗೇಶ್ವರ ಸ್ವಾಮಿಯ ವಾರ್ಷಿಕ ಕಾರ್ಣಿಕೋತ್ಸವದ ಪ್ರಯುಕ್ತ ಭದ್ರಾ ಜಲಾಶಯದಿಂದ ತುಂಗ-ಭದ್ರಾ ನದಿಗೆ ಫೆ.5ರಿಂದ ಫೆ.11ರವರೆಗೆ ಒಟ್ಟು 5800 ಕ್ಯೂಸೆಕ್ ಪ್ರಮಾಣದ ನೀರನ್ನು ಭದ್ರಾ ನದಿಗೆ ಹರಿಸಲಾಗುವುದು.

ಈ ಅವಧಿಯಲ್ಲಿ ನದಿಯಲ್ಲಿ ಸಾರ್ವಜನಿಕರು ಮತ್ತು ರೈತರು ತಿರುಗಾಡುವುದು, ದನಕರುಗಳನ್ನು ಮೇಯಿಸುವುದು ಮತ್ತು ತೋಟಗಾರಿಕೆ ಸಂಬಂಧಿಸಿದ ಕೆಲಸ ಮಾಡುವುದು ಇತ್ಯಾದಿಗಳನ್ನು ನಿಷೇಧಿಸಲಾಗಿದೆ. ಸಾರ್ವಜನಿಕರು ಮತ್ತು ರೈತರು ನದಿ ದಂಡೆಯಲ್ಲಿ ಪಂಪ್‌ಸೆಟ್ ಅಳವಡಿಸುವುದು ಮತ್ತು ಅನಧಿಕೃತವಾಗಿ ನೀರೆತ್ತುವುದನ್ನು ನಿಷೇಧಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಪದಾಧಿಕಾರಿಗಳ ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಗದಗ ಜಿಲ್ಲಾ ಘಟಕದ ಪೂರ್ವಭಾವಿ ಸಭೆಯನ್ನು ಫೆ 7ರಂದು ಸಂಜೆ 4 ಗಂಟೆಗೆ ಗದುಗಿನ ವೀರಶೈವ ಜನರಲ್ ಲೈಬ್ರರಿಯಲ್ಲಿ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಅವರ ಅಧ್ಯಕ್ಷತೆಯಲ್ಲಿ ಕರೆಯಲಾಗಿದೆ. ಮಹಾಸಭೆಯ ರಾಜ್ಯಾಧ್ಯಕ್ಷ ಶಂಕರ್ ಬಿದರಿ ಅವರು ಫೆ 9ರಂದು ಗದುಗಿಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಕಾರ್ಯಕ್ರಮದ ರೂಪುರೇಷೆಗಳನ್ನು ಸಿದ್ಧಪಡಿಸಲು ಪೂರ್ವಭಾವಿ ಸಭೆಯನ್ನು ಕರೆಯಲಾಗಿದ್ದು, ಮಹಾಸಭೆಯ ಜಿಲ್ಲಾ ಹಾಗೂ ಎಲ್ಲ ತಾಲೂಕ ಘಟಕಗಳ ಪದಾಧಿಕಾರಿಗಳು, ನಿರ್ದೇಶಕರು, ವಿಶೇಷ ಆಹ್ವಾನಿತರು ಆಗಮಿಸಿ ಸಲಹೆ-ಸೂಚನೆ ನೀಡುವಂತೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ ವಿನಂತಿಸಿದ್ದಾರೆ.

### ಗ್ರಾಮ ಆಡಳಿತ ಅಧಿಕಾರಿಗಳ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ ಫೆ. 10ರಿಂದ

# ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆಗಳು ಮತ್ತು ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ಆದೇಶದ ಮೇರೆಗೆ ಜಿಲ್ಲೆಯಲ್ಲಿ ಫೆ. 10ರಿಂದ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಘಟಕದ ಉಪಾಧ್ಯಕ್ಷ ಚಂದ್ರಶೇಖರ ನಾಯಕ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 2024ರ ಸೆ. 26ರಿಂದ ಅ. 3ರವರೆಗೆ ರಾಜ್ಯಾದ್ಯಂತ ಹಮ್ಮಿಕೊಂಡಿದ್ದ ಗ್ರಾಮ ಆಡಳಿತ ಅಧಿಕಾರಿಗಳ ಅನಿರ್ದಿಷ್ಟಾವಧಿ ಮುಷ್ಕರದ ಸಂದರ್ಭದಲ್ಲಿ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದ್ದರಿಂದ ಮುಷ್ಕರ ಹಿಂಪಡೆಯಲಾಗಿತ್ತು. ಆದರೆ, ಈವರೆಗೂ ಭರವಸೆ ಈಡೇರಿಸದ ಕಾರಣ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ.

ಗ್ರಾಮ ಆಡಳಿತ ಅಧಿಕಾರಿಗಳ ಪ್ರಮುಖ



ಬೇಡಿಕೆಗಳಾದ ರಾಜ್ಯಾದ್ಯಂತ ಆಧಾರ ಸೀಡಿಂಗ್ ಪ್ರಕ್ರಿಯೆಯಲ್ಲಿ ಪತ್ತೆಯಾಗಿರುವ 51.5 ಲಕ್ಷ ಮೃತ ಖಾತೆದಾರರ ಪಹಣಿ ದಾಖಲೆ ಅಭಿಯಾನ ಮಾದರಿಯಲ್ಲಿ ವಾರಸುದಾರರ ಹೆಸರುಗಳಿಗೆ ಪೌತಿ ಖಾತೆ ದಾಖಲಿಸುವಂತೆ ಇ-ಪೌತಿ ಖಾತಾ ಆಂದೋಲನ ಕೈಬಿಡಬೇಕು. ಚಿಕ್ಕಮಗಳೂರು ಜಿಲ್ಲೆಯಲ್ಲಿ 30 ಗ್ರಾಮ ಆಡಳಿತ ಅಧಿಕಾರಿಗಳ ವಾರ್ಷಿಕ ವೇತನ ಬಡ್ತಿಯನ್ನು ತಡೆದು ನೈಸರ್ಗಿಕ ನ್ಯಾಯ ತತ್ವಗಳನ್ನು ಹಾಗೂ ಎಲ್ಲ ನಿಯಮಗಳನ್ನು ಉಲ್ಲಂಘಿಸಿ ಹೊರಡಿಸಿರುವ ದಂಡನಾ ಆದೇಶವನ್ನು ಕೂಡಲೇ ಹಿಂಪಡೆಯಬೇಕು.

ಕಂದಾಯ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರಕಾರಿ ನೌಕರರ ಎಲ್ಲಾ ವೃಂದಗಳನ್ನು ಒಳಗೊಂಡಂತೆ ನೀಡುತ್ತಿರುವ ಅನುಕಂಪದ ನೇಮಕಾತಿಯ ಹುದ್ದೆಯ ವೃಂದ ಹಾಗೂ ನೇಮಕಾತಿ ತಿದ್ದುಪಡಿ ಮಾಡಬೇಕು. ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಜೀವಹಾನಿ ಸಂಭವಿಸಿದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಕುಟುಂಬಕ್ಕೆ 50 ಲಕ್ಷ ರೂ. ಪರಿಹಾರ ಮಂಜೂರು ಮಾಬೇಕು ಇವೇ ಮುಂತಾದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

> ಗ್ರಾಮ ಆಡಳಿತ ಅಧಿಕಾರಿಗಳಿಗೆ ಸುಸಜ್ಜಿತ ಕಚೇರಿ, ಗುಣಮಟ್ಟದ ಟೇಬಲ್, ಖುರ್ಚಿ, ಅಲ್ಮೇರಾ, ಮೊಬೈಲ್, ಲ್ಯಾಪ್‌ಟಾಪ್, ಪ್ರಿಂಟರ್ ಹಾಗೂ ಸ್ಕ್ಯಾನರ್‌ಗಳನ್ನು ಒದಗಿಸಬೇಕು. ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಯನ್ನು ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿ ನಿಗದಿಪಡಿಸಿ ಆದೇಶ ನೀಡಬೇಕು ಎಂಬ ಬೇಡಿಕೆಯನ್ನಿಡಲಾಗಿದೆ ಎಂದು ಚಂದ್ರಶೇಖರ ನಾಯಕ ತಿಳಿಸಿದ್ದಾರೆ.

## ಸಂಪಾದಕೀಯ

# ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಸರಕಾರದ ನೀತಿಯೇ ಕಾರಣ

ಮೈಕ್ರೋ ಫೈನಾನ್ಸ್ ಏಜೆಂಟರ ಸಾಲ ಮರುಪಾವತಿ ಕಿರುಕುಳ ಇನ್ನೂ ಅಲ್ಲಲ್ಲಿ ಕೇಳಿ ಬರುತ್ತಲೇ ಇದೆ. ಸಾಲ ವಸೂಲಾತಿ ವೇಳೆ ಮೈಕ್ರೋ ಫೈನಾನ್ಸ್ ನೌಕರರ ಅಮಾನವೀಯ ವರ್ತನೆಗೆ ಕಡಿವಾಣ ಹಾಕಲು ಸರ್ಕಾರ ಸುಗ್ರೀವಾಜ್ಞೆ ಮೂಲಕ ಕಾಯ್ದೆಯನ್ನು ಜಾರಿಗೊಳಿಸಲು ಮುಂದಾಗಿದೆ.

ಆದರೆ ಈ ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಸರ್ಕಾರದ ನೀತಿಯೇ ಪರೋಕ್ಷ ಕಾರಣವಾಗಿದೆ. ಒಂದು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಜನಸಾಮಾನ್ಯರಿಗೆ ಸುಲಭವಾಗಿ ಸಾಲ ಸಿಗುತ್ತಿಲ್ಲ. ಸಹಕಾರಿ ಸಂಘಗಳಲ್ಲೂ ನೆರವು ದೊರೆಯುತ್ತಿಲ್ಲ.

ಕೃಷಿ ಪತ್ತಿನ ಸಹಕಾರಿ ಸಂಘಕ್ಕೆ ರೈತರನ್ನು ಸದಸ್ಯತ್ವ ಮಾಡಿಕೊಳ್ಳುತ್ತಿಲ್ಲ. ಸದಸ್ಯತ್ವ ಸಿಕ್ಕರೆ 3 ಲಕ್ಷ ರೂ. ವರೆಗೂ ಶೂನ್ಯ ಬಡ್ಡಿ ದರದಲ್ಲಿ ಸಾಲ ಸಿಗುತ್ತದೆ. ಆದರೆ ಸಕಾಲದಲ್ಲಿ ಸರಕಾರದ ನೆರವು ಸಿಗದ ಜನ ಸಹಜವಾಗಿ ಮೈಕ್ರೋ ಫೈನಾನ್ಸ್ ಮೊರೆ ಹೋಗುವುದು ಅನಿವಾರ್ಯವಾಗಿದೆ.

ಸಹಜವಾಗಿ ಹೆಚ್ಚಿನ ದಾಖಲಾತಿಗಳನ್ನು ಕೇಳದೆ ಮೈಕ್ರೋ ಫೈನಾನ್ಸ್ ಸಾಲ ಕೊಡುತ್ತವೆ. ರಾಷ್ಟ್ರೀಕೃತ ಬ್ಯಾಂಕ್, ಸಹಕಾರಿ ಬ್ಯಾಂಕ್, ಪತ್ತಿನ ಸಹಕಾರಿ ಬ್ಯಾಂಕುಗಳಿಗೆ ಹೋಲಿಕೆ ಮಾಡಿದರೆ ಬಡ್ಡಿ ದರ ಹೆಚ್ಚಿರುತ್ತದೆ. ಆದರೆ ಸಕಾಲಕ್ಕೆ ಸಿಗುತ್ತದೆ. ಇಂಥ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡದಿದ್ದಲ್ಲಿ ಶುರುವಾಗುವುದೇ ಇಂಥ ಅಮಾನವೀಯ ಕಿರುಕುಳಗಳು.

ಈ ಮೈಕ್ರೋ ಫೈನಾನ್ಸ್ ಗಳು ಕೊಡುವ ಸಾಲದ ಮರುಪಾವತಿ ಪ್ರಮಾಣ ಶೇ. 95ರಷ್ಟಿದೆ. ಸಹಜವಾಗಿ ಸಾಲ ವಸೂಲಾತಿಯನ್ನು ಗಂಭೀರವಾಗಿ ಮಾಡಿರುತ್ತಾರೆ ಎನ್ನುವುದಕ್ಕೆ ಸಾಕ್ಷಿಯಾಗಿದೆ. ಇಷ್ಟೆಲ್ಲಾ ಅವಾಂತರದ ಮಧ್ಯೆಯೂ ಜನ ಸಾಲಕ್ಕಾಗಿ ಮೈಕ್ರೋ ಫೈನಾನ್ಸ್ ಗಳನ್ನೆ ಆಶ್ರಯಿಸಿರುವುದು, ಅವುಗಳ ವಹಿವಾಟಿನಿಂದ ಸ್ಪಷ್ಟವಾಗುತ್ತದೆ.

ಹೀಗಾಗಿ ಸರಕಾರ ಮೈಕ್ರೋ ಫೈನಾನ್ಸ್ ಸಾಲ ವಸೂಲಾತಿ ಮೇಲೆ ಹಿಡಿತ ಸಾಧಿಸುವ ಬದಲು, ಜನರಿಗೆ ಸುಲಭವಾಗಿ ಕಡಿಮೆ ಬಡ್ಡಿ ದರದಲ್ಲಿ ಸಾಲ ಸಿಗುವಂತೆ ಮಾಡುವ ಕಾಯಿದೆ ರೂಪಿಸಿದರೆ ಜನರಿಗೆ ಅನುಕೂಲ.

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 7 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 29 – ರಾಜೀವ ಗಾಂಧಿನಗರ, ಶಿಕ್ಷಕರ ಬಡಾವಣೆ ಪೂರ್ತಿ ಭಾಗಗಳು, ಮಸೂತಿ ಲೈನ್ ಮೇಲಿನ ಭಾಗ. ವಾರ್ಡ್ ನಂ. 11 – ಶಿವ ಬಸವ ನಗರ, ಅಬ್ದುಲ್ ಕಲಾಂ, ರಿಂಗ್ ರೋಡ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 17, 18, 19 ,25 – ಬಾವಿಯವರ ಲೈನ್, ಹಾವನೂರ ಲೈನ್, ನಮಾಜಿಯವರ ಲೈನ್, ದುರುಗಮ್ಮನ ಗುಡಿ 2 ಭಾಗಗಳು, ಕಾಗದಗೇರಿ ಹೊಸ ಲೈನ್, ಭಟ್ಟರ ಲೈನ್, ಪಿ ಮತ್ತು ಟಿ ರಸ್ತೆ, ಮಜ್ಜಿಗೆಯವರ ಹೊಸ ಲೈನ್, ಮೀನಿನ ಮಾರ್ಕೆಟ, ಬಳಿಗಾರ ಲೈನ್.

ವಾರ್ಡ್ ನಂ. 1 – ಎಸ್ ಎಂ ಕೃಷ್ಣ ನಗರ ಪೂರ್ತಿ ಭಾಗಗಳು. ವಾರ್ಡ್ 21, 22 – ವಿಜಯನಗರ ಶಾಲೆ, ಕರುಗಲ್ ಲೇಔಟ್, ಶಿಗ್ಗಾಂವಿ ಲೇಔಟ್, ಕಮತರ ಪ್ಲಾಟಿನಂ, ಟವರ್ ಕಂಬ, ವಾಲ್ಮೀಕಿ ಭವನ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 35 – ವಿಶ್ವೇಶ್ವರಯ್ಯ ನಗರ, ಸಣ್ಣ ಸಾಯಿ ಬಾಬಾ ಗುಡಿ, ಬಾಲಾಜಿ ನಗರ, 9 ನಂ ಶಾಲೆ, ಪತ್ತಾರ ಸರ್ ಲೈನ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಮತ್ತು ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಫಾಯಿ ಕರ್ಮಚಾರಿಗಳ ನಿಯೋಜನೆ ನಿಷೇಧ ಹಾಗೂ ಪುನರ್ ವಸತಿ ಕಾಯ್ದೆ ಅನ್ವಯ ಉಪವಿಭಾಗ ಮಟ್ಟದ ಸಮಿತಿ ರಚಿಸಲು ಸಫಾಯಿ ಕರ್ಮಚಾರಿಗಳ ಪುನರ್ ವಸತಿಗಾಗಿ ಕೆಲಸ ಮಾಡುತ್ತಿರುವ ಸಂಘಟನೆಗಳಿಗೆ ಸೇರಿದ ಅಥವಾ ಉಪವಿಭಾಗದಲ್ಲಿ ವಾಸಿಸುತ್ತಿರುವ ಸಮುದಾಯವನ್ನು ಪ್ರತಿನಿಧಿಸುವ ಇಬ್ಬರು ಸಾಮಾಜಿಕ ಕಾರ್ಯಕರ್ತರು (ಕಡ್ಡಾಯವಾಗಿ ಒಬ್ಬ ಮಹಿಳೆ ನೇಮಕ ಮಾಡುವುದು) ಅಧಿಕಾರೇತರ ಸದಸ್ಯರನ್ನಾಗಿ ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸ್ತಕರು ನಿಗಧಿತ ನಮೂನೆಯಲ್ಲಿ ಫೆಬ್ರವರಿ 20 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಗದಗ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ, ಕಚೇರಿಯಿಂದ ಪಡೆಯಬಹುದಾಗಿದೆ ಎಂದು ಉಪವಿಭಾಗಾಧಿಕಾರಿಗಳು ಪ್ರಕಟಣೆ ನೀಡಿದ್ದಾರೆ.

## ಭಾರತೀಯರಿಗೆ ಕೈಕೋಳ ಹಾಕಿ ಗಡಿಪಾರು ಮಾಡಲು ಮೋದಿ ಅವಕಾಶ ಕೊಡಬಾರದಿತ್ತು

**■ವಿಜಯಸಾಕ್ಷಿ ಸುದ್ದಿ, ಹೊಸದಿಲ್ಲಿ**

ಅಮೆರಿಕದಲ್ಲಿ ಅಕ್ರಮವಾಗಿ ನೆಲೆಸಿರುವ ಭಾರತೀಯರನ್ನು ಗಡೀಪಾರು ಮಾಡಿದ ರೀತಿಗೆ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಗುರುವಾರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು. "ಪ್ರಧಾನಿ ನರೇಂದ್ರ ಮೋದಿ ಮತ್ತು ವಿದೇಶಾಂಗ ಸಚಿವ ಎಸ್. ಜೈಶಂಕರ್ ಈ ವಿಷಯದ ಬಗ್ಗೆ ಉತ್ತರಿಸಬೇಕು" ಎಂದು ಒತ್ತಾಯಿಸಿದರು.

104 ಜನ ಅಕ್ರಮ ಭಾರತೀಯ ವಲಸಿಗರನ್ನು ಹೊತ್ತೊಯ್ಯುವ ಯುಎಸ್ ಮಿಲಿಟರಿ ವಿಮಾನ ಬುಧವಾರ ಅಮೃತಸರದಲ್ಲಿ ಇಳಿಯಿತು. ಅಕ್ರಮ ವಲಸಿಗರ ವಿರುದ್ಧದ ಕ್ರಮದ ಭಾಗವಾಗಿ ಡೊನಾಲ್ಡ್ ಟ್ರಂಪ್ ಸರ್ಕಾರವು ಗಡೀಪಾರು ಮಾಡಿದ ಭಾರತೀಯರ ಮೊದಲ ಬ್ಯಾಚ್ ಇದು. ಪ್ರಯಾಣದುದ್ದಕ್ಕೂ ತಮ್ಮ ಕೈಗಳು ಮತ್ತು ಕಾಲುಗಳನ್ನು ಬಂಧಿಸಲಾಗಿತ್ತು, ಅಮೃತಸರ ವಿಮಾನ ನಿಲ್ದಾಣದಲ್ಲಿ ಇಳಿದ ನಂತರವೇ ಅವರ ಸಂಕೋಲೆಗಳನ್ನು ಬಿಚ್ಚಲಾಯಿತು ಎಂದು ಗಡೀಪಾರಾದ ಭಾರತೀಯರೊಬ್ಬರು ಹೇಳಿಕೊಂಡರು. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಮಾತನಾಡಿ, "ಮೋದಿ ಜಿ ಮತ್ತು ಟ್ರಂಪ್ ಜಿ ತುಂಬಾ ಒಳ್ಳೆಯ ಸ್ನೇಹಿತರು ಎಂದು ಬಹಳಷ್ಟು ಹೇಳಲಾಗಿತ್ತು. ಆದರೂ ಅವರ ಕೈಗೆ ಕೋಳ ಹಾಕಲು ಮೋದಿ ಜಿ ಅವಕಾಶ ನೀಡಿದದ್ದು ಯಾಕೆ? ಅವರನ್ನು ಕರೆತರಲು ನಾವು ನಮ್ಮ ವಿಮಾನವನ್ನು ಕಳುಹಿಸಬಹುದಿತ್ತಲ್ಲವೇ ಮನುಷ್ಯರೊಂದಿಗೆ ವರ್ತಿಸಬೇಕಾದ ರೀತಿ ಇದೇನಾ" ಎಂದು ಅವರು ಹೇಳಿದರು.

### ಭಾರತೀಯನು ಬಜೆಟ್ ಅರಿತಾಗ ಮಾತ್ರ ಭಾರತದ ಆರ್ಥಿಕತೆ ಬಲಶಾಲಿಯಾಗಲು ಸಾಧ್ಯ !

# ಮುಂಗಡಪತ್ರದ ಪರಿಕಲ್ಪನೆ ಬಗೆಗೊಂದು ಮೆಲುಕು




ಇತ್ತೀಚೆಗೆಷ್ಟೇ ಕೇಂದ್ರ ಬಜೆಟ್‌ನ್ನು ಮಂಡಿಸಲಾಯಿತು. ಅದಕ್ಕೆ ಪರ-ವಿರೋಧದ ಚರ್ಚೆ ಕೂಡ ಜರುಗಿದರೂ ಜನರು ಜಾಗೃತರಾಗಿರುವುದಕ್ಕಿಂತ ಸಾಮಾಜಿಕ ಜಾಲತಾಣಗಳಲ್ಲಿ ಜಗಳವಾಡಿದ್ದೇ ಹೆಚ್ಚು. ಅದೆಲ್ಲದರ ಹೊರತಾಗಿಯೂ ಇಂದು ನಾವು ಬಜೆಟ್ ಅಥವಾ ಮುಂಗಡಪತ್ರದ ಪರಿಕಲ್ಪನೆ ಬಗ್ಗೆ ಮೆಲಕು ಹಾಕಲು ಪ್ರಯತ್ನಿಸೋಣ.

ಕೇಂದ್ರ ಬಜೆಟ್ ಎನ್ನುವುದು ಕೇಂದ್ರ ಸರ್ಕಾರದ ವಾರ್ಷಿಕ ಹಣಕಾಸು ಹೇಳಿಕೆಯಾಗಿದ್ದು, ಪ್ರತಿ ವರ್ಷ ಫೆಬ್ರವರಿ 1ರಂದು ಲೋಕಸಭೆಯಲ್ಲಿ ಹಣಕಾಸು ಸಚಿವರು ಮಂಡಿಸುತ್ತಾರೆ. ಹಣಕಾಸು ಸಚಿವಾಲಯದ ಆರ್ಥಿಕ ವ್ಯವಹಾರಗಳ ಇಲಾಖೆ ಬಜೆಟ್ ದಾಖಲೆಯನ್ನು ಸಿದ್ಧಪಡಿಸುವ ಜವಾಬ್ದಾರಿಯುತ ನೋಡಲ್ ಸಂಸ್ಥೆಯಾಗಿದೆ.

ಈ ಬಜೆಟ್‌ಗೆ ಸಂಬಂಧಿಸಿದಂತೆ ನಮ್ಮ ಸಂವಿಧಾನದಲ್ಲಿ ವಿಶೇಷ ಸ್ಥಾನಮಾನ ನೀಡಲಾಗಿದ್ದು, ಭಾರತೀಯ ಸಂವಿಧಾನ 112ನೇ ವಿಧಿಯ ಪ್ರಕಾರ ಬಜೆಟ್ ಎಂದರೆ ಕೇಂದ್ರ ಸರ್ಕಾರದ ಅಂದಾಜು ಸ್ವೀಕೃತಿ ಮತ್ತು ವೆಚ್ಚಗಳ ಹೇಳಿಕೆಯಾಗಿದೆ. ಸಂವಿಧಾನದ 112ನೇ ಅನುಚ್ಛೇದದನ್ವಯ ಕೇಂದ್ರ ಬಜೆಟ್ ಹಾಗೂ 202ನೇ ಅನುಚ್ಛೇದದನ್ವಯ ರಾಜ್ಯ ಬಜೆಟ್‌ನ್ನು ಮಂಡಿಸಲಾಗುತ್ತದೆ. ಆದರೆ ಸಂವಿಧಾನದಲ್ಲಿ ಬಜೆಟ್ ಎಂಬ ಪರಿಕಲ್ಪನೆ ಬಗ್ಗೆ ಎಲ್ಲಿಯೂ ಉಲ್ಲಖವಿಲ್ಲ, ಬದಲಿಗೆ ಮುಂಗಡ ಪತ್ರವೆಂದು ಉಲ್ಲೇಖಿಸಲಾಗಿದೆ. ಕೇಂದ್ರ ವಿತ್ತ ಸಚಿವರು ರಾಷ್ಟ್ರಪತಿಗಳ ಅನುಮತಿ ಮೇರೆಗೆ ಕೇಂದ್ರ ಬಜೆಟ್‌ನ್ನು ಹಾಗೂ ರಾಜ್ಯ ಹಣಕಾಸು ಸಚಿವರು ರಾಜ್ಯಪಾಲರ ಅನುಮತಿಯೊಂದಿಗೆ ರಾಜ್ಯ ಬಜೆಟ್‌ನ್ನು ಮಂಡಿಸುತ್ತಾರೆ.

ಬಜೆಟ್ ಮಂಡಿಸುವ ಪರಿಕಲ್ಪನೆ ಬ್ರಿಟೀಷ್ ಕಾಲದಿಂದಲೂ ರೂಢಿಯಲ್ಲಿದ್ದು, ಬಜೆಟ್ ಪ್ರಕ್ರಿಯೆಗೆ ಸುದೀರ್ಘ 185 ವರ್ಷಗಳ ಇತಿಹಾಸವಿದೆ. ಬಜೆಟ್‌ಗೆ ಸಂಬಂಧಿಸಿದಂತೆ ಇತಿಹಾಸವನ್ನು ಒಮ್ಮೆ ಇಣುಕಿ ನೋಡುವುದಾದರೆ ಈಸ್ಟ್ ಇಂಡಿಯಾ ಕಂಪನಿಯು ಎಪ್ರೀಲ್ 7, 1860ರಂದು ಭಾರತದಲ್ಲಿ ಮೊಟ್ಟಮೊದಲ ಬಾರಿಗೆ ಬಜೆಟ್‌ನ್ನು ಪರಿಚಯಿಸಿತು. ಜೇಮ್ಸ್ ವಿಲ್ಸನ್ ಎಂಬ ಬ್ರಿಟೀಷ್ ವ್ಯಕ್ತಿ ಪ್ರಥಮ ಬಾರಿಗೆ ಭಾರತದ ಬಜೆಟ್‌ನ್ನು ಮಂಡಿಸಿದನು. ತದನಂತರ ಆರ್.ಕೆ. ಷಣ್ಮುಗಂ ಚೆಟ್ಟಿಯವರು ನವೆಂಬರ್ 26, 1947ರಂದು ಸ್ವತಂತ್ರ ಭಾರತದ ಮೊದಲ ಬಜೆಟ್ ಮಂಡಿಸಿದರು.

1955ರವರೆಗೂ ಇಂಗ್ಲೀಷ್‌ನಲ್ಲಿ ಮಾತ್ರ ಬಜೆಟ್‌ನ್ನು ಮಂಡಿಸಲಾಗುತ್ತಿತ್ತು, 1955-56ರಿಂದಿಚೇಗೆ ಬಜೆಟ್ ದಾಖಲೆಗಳನ್ನು ಇಂಗ್ಲೀಷ್ ಮತ್ತು ಹಿಂದಿ ಎರಡೂ ಬಾಷೆಗಳಲ್ಲಿ ಮುದ್ರಿಸಲಾಗುತ್ತಿದೆ. 2000 ಇಸ್ವಿ ಮುಂಚೆ ಬ್ರೀಟನ್ ಕಾಲಮಾನಕ್ಕನುಗುಣವಾಗಿ ಸಂಜೆ 5 ಗಂಟೆಗೆ ಬಜೆಟ್‌ನ್ನು ಮಂಡಿಸಲಾಗುತ್ತಿತ್ತು, ನಂತರ ಅದನ್ನು ಬೆಳಿಗ್ಗೆ 11 ಗಂಟೆಗೆ ನಿಗದಿಪಡಿಸಲಾಯಿತು. 2016ವರೆಗೂ ರೈಲ್ವೆ ಬಜೆಟ್‌ನ್ನು ಪ್ರತ್ಯೇಕವಾಗಿ ಮಂಡಿಸಲಾಗುತ್ತಿತ್ತು, 2016ರಿಂದ ರೈಲ್ವೆ ಬಜೆಟ್‌ನ್ನು ಕೂಡ ಸಾಮಾನ್ಯ ಬಜೆಟ್ ಜೊತೆಗೆ ಮಂಡಿಸಲಾಗುತ್ತದೆ. 2022-23ರವರೆಗೆ ಬಜೆಟ್ ದಾಖಲೆ ಪ್ರತಿಗಳಿಗೆ ಚರ್ಮದ ಚೀಲವನ್ನು ಬಳಸಲಾಗುತ್ತಿತ್ತು, 2023ರ ನಂತರ ಕೆಂಪು ವರ್ಣದ ಚೀಲದಲ್ಲಿ ಟ್ಯಾಬ್ ತಂದು ಡಿಜಿಟಲ್ ರೂಪದ ಬಜೆಟ್‌ನ್ನು ಮಂಡಿಸಲಾಗುತ್ತಿದೆ.

ಹೀಗೆ ಬ್ರಿಟೀಷ್‌ರ ಹಲವು ಪದ್ಧತಿಗಳಿಗೆ ವಿದಾಯ ಹೇಳಿ, ಹೊಸ ಆಯಾಮಗಳನ್ನು ಅಳವಡಿಸಿಕೊಳ್ಳುವ ಮೂಲಕ ಕೇಂದ್ರ ಮುಂಗಡ ಪತ್ರದಲ್ಲಿ ಹೊಸ ಅಧ್ಯಾಯಗಳನ್ನು ಪರಿಚಯಿಸಲಾಗಿದೆ. ಡಾ. ಮನಮೋಹನ ಸಿಂಗ್ ಅವರು 1991ರಲ್ಲಿ ಲೈಸನ್ಸ್ ರಾಜ್ ಪದ್ಧತಿಗೆ ಹಂತ್ಯಹಾಡಿ, ಆರ್ಥಿಕ ಉದಾರವಾದದ ಯುಗವನ್ನು ಆರಂಭಿಸಿದರು. 1997-98ರಲ್ಲಿ ಪಿ.ಚಿದಂಬರಂ ಅವರು ತೆರಿಗೆ ದರವನ್ನು ಇಳಿಸುವ ಮೂಲಕ ತೆ-ರಿಗೆ ಸಂಗ್ರಹವನ್ನು ಹೆಚ್ಚಿಸುವಂತಹ 'ಲ್ಯಾಪರ್ ಕರ್ವ' ಸಿದ್ಧಾಂತವನ್ನು ಅನುಸರಿಸಿ ಕನಸಿನ ಬಜೆಟ್‌ನ್ನು ಮಂಡಿಸಿದರು. ಯಶ್ವಂತ್ ಸಿನ್ಹಾ ಅವರು 2000ರಲ್ಲಿ ಮೀಲೇನಿಯಂ ಬಜೆಟ್ ಮಂಡಿಸುವ ಮೂಲಕ ಭಾರತದ ಮಾಹಿತಿ ತಂತ್ರಜ್ಞಾನ ಕ್ಷೇತ್ರದ ಪ್ರಗತಿಗೆ ನಾಂದಿ ಹಾಡಿದರು. ವಿತ್ತ ಮಂತ್ರಿ ನಿರ್ಮಲಾ ಸೀತಾರಾಮನ್ ಅವರು 2021ರಲ್ಲಿ ಏಷ್ಯಾದ 3ನೇ ಅತೀ ದೊಡ್ಡ ಆರ್ಥಿಕತೆಯನ್ನು ಮತ್ತೆ ಹಳಿಗೆ ತರುವ ಗುರಿಯೊಂದಿಗೆ ಶತಮಾನದ ಬಜೆಟ್‌ನ್ನು ಮಂಡಿಸಿದರು. 2025-26 ಸಾಲಿನ ಈ ಬಜೆಟ್ ಅಮೃತಕಾಲದ ಮೊದಲ ಬಜೆಟ್ ಆಗಿದ್ದು, ಸ್ವಾತಂತ್ರ್ಯದ 75ನೇ ವರ್ಷದಲ್ಲಿ ಜಗತ್ತು ಭಾರತದ ಆರ್ಥಿಕತೆಯನ್ನು ಪ್ರಕಾಶಮಾನವಾದ ನಕ್ಷತ್ರ ಎಂದು ಗುರುತಿಸುವ ಈ ಸಂದರ್ಭದಲ್ಲಿ ಭಾರತೀಯನೇ ಬಜೆಟ್ ಪ್ರಕ್ರಿಯೆಯನ್ನು ಅರಿಯದಿರುವುದು ವಿಪರ್ಯಾಸ.

ಈಗ ನಾನು ಹೇಳಲು ಬಯುಸುವ ಅನಿಸಿಕೆ ಅಥವಾ ಸೂಚನೆಗಳು ಮುಂಬರುವ ರಾಜ್ಯ ಸರ್ಕಾರದ ಬಜೆಟ್‌ಗೂ ಕೂಡ ಅನ್ವಯುವಾಗುತ್ತದೆ. ಅನಕ್ಷರಸ್ಥರಿಗಿಂತ ಬಜೆಟ್ ಬಗ್ಗೆ ಅರಿವಿಲ್ಲದವರು ಅಕ್ಷರ ಜ್ಞಾನವುಳ್ಳವರೇ ಹೆಚ್ಚು, ಮುಂಗಡಪತ್ರದ ಬಗ್ಗೆ ತಿಳಿದವನು ಒಂದು ದೇಶದ ಆರ್ಥಿಕತೆಗೆ ಬಜೆಟ್ ಎನ್ನುದು ಎಷ್ಟು ಮುಖ್ಯ ಮತ್ತು ದೇಶದ ಆರ್ಥಿಕತೆಗೆ ಯಾವ ಸೂತ್ರಗಳನ್ನು ಅನುಸರಿಸಿದರೆ ಸೂಕ್ತ ಎಂಬ ಸಣ್ಣ ಅರಿವು ಮೂಡುತ್ತದೆ. ಪ್ರತಿಯೊಬ್ಬ ನಾಗರೀಕನಿಗೆ ಬಜೆಟ್ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳಿಂದ ಬಜೆಟ್ ಮಂಡಿಸುವ ದಿನಾಂಕ, ಸಚಿವಾಲಯ, ಮುಂಗಡಪತ್ರದ ದಾಖಲೆಗಳು ಹಾಗೂ ಆಯಾ ಕ್ಷೇತ್ರಗಳಿಗೆ ಬಿಡುಗಡೆಯಾಗುವ ಅನುದಾನದ ಬಗ್ಗೆ ಪ್ರತಿಯೊಬ್ಬ ಭಾರತೀಯನ ಮೊಬೈಲ್ ಸಂಖ್ಯೆಗೆ ಸಂದೇಶ ರವಾನಿಸುವ ಕೆಲಸವಾಗಬೇಕು.

ಜಿಲ್ಲಾ ಪಂಚಾಯತಿ, ತಾಲೂಕ ಪಂಚಾಯಿತಿ, ಗ್ರಾ.ಮ ಪಂಚಾಯಿತಿ, ಸರ್ಕಾರಿ ಇಲಾಖೆಗಳು ಸೇರಿದಂತೆ ಅಂಗನವಾಡಿಗಳಂತಹ ಸಣ್ಣ ಸರ್ಕಾರಿ ಕಛೇರಿಗಳಲ್ಲಿಯೂ ಕೂಡ ಬಜೆಟ್ ಕುರಿತು ಮಾಹಿತಿ ಹಾಗೂ ಪ್ರಚಾರ ಪ್ರಕ್ರಿಯೆಗಳು ಜರುಗಬೇಕು. ಇನ್ನೂ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣಗಳು ಸೇರಿದಂತೆ ಬಸ್ ಹಾಗೂ ರೈಲ್ವೆಗಳಲ್ಲಿಯೂ ಕೂಡ ಎಲ್‌ಇಡಿ ಸ್ಕ್ರೀನ್, ಟಿ.ವಿ, ರೇಡಿಯೋಗಳ ಮೂಲಕ ಬಜೆಟ್ ಬಿತ್ತರಿಸುವ ಕೆಲಸ ನಡೆಯಬೇಕು. ಅಷ್ಟೇ ಅಲ್ಲದೇ ಸಾರ್ವಜನಿಕರಿಗೆ ಬಜೆಟ್ ಪ್ರಕ್ರೀಯೆಯಲ್ಲಿ ಭಾಗವಹಿಸಲು ಅವಕಾಶ ನೀಡಬೇಕು. ಅಂದರೆ ನಾಗರಿಕರಿಗೆ ಸಾಮಾಜಿಕ ಮಾಧ್ಯಮ ಅಥವಾ ಡಿಜಿಟಲ್ ಮಾಧ್ಯಮಗಳ ಮೂಲಕ ಬಜೆಟ್‌ಗೆ ಸಂಬಂಧಿಸಿದಂತೆ ಸಲಹೆ ಸೂಚನೆಗಳನ್ನು ನೀಡುವ ಅವಕಾಶ ದೊರೆಯುವಂತಾಗಬೇಕು.

ಈ ಎಲ್ಲ ಕಾರ್ಯಗಳಿಗೆ ಮೊದಲು ತಳ ಮಟ್ಟದಲ್ಲಿ ಅಡಿಪಾಯ ಹಾಕಬೇಕಾಗುತ್ತದೆ. ಸ್ಥಳೀಯ ನಾಯಕರಾದ ಶಾಸಕರು, ಸಂಸದರು, ಜಿ.ಪಂ ಅಧ್ಯಕ್ಷ, ತಾ.ಪಂ ಅಧ್ಯಕ್ಷ, ಗ್ರಾ.ಪಂ ಅಧ್ಯಕ್ಷ ಹಾಗೂ ಸರ್ವ ಸದಸ್ಯರುಗಳು ನಗರ ಸಭೆ, ಪುರಸಭೆ ಪಟ್ಟಣ ಪಂಚಾಯತ ಅಧ್ಯಕ್ಷ, ಆಯುಕ್ತರು, ಸದಸ್ಯರು ಹಾಗೂ ವಿವಿಧ ಸಮಿತಿಗಳು, ನಿಗಮ ಮಂಡಳಿಗಳ ಸರ್ವ ಸದಸ್ಯರುಗಳ ಪಾತ್ರ ಬಹುದೊಡ್ಡದಾಗಿರುತ್ತದೆ. ಈ ಪ್ರಕ್ರೀಯೆ ಸುಗಮವಾಗಿ ಸಾಗಬೇಕಾದರೆ ಸ್ಥಳೀಯ ನಾಯಕರ ಪಾತ್ರದಂತೆ ಅವರ ಮನಸ್ಸು ದೊಡ್ಡದಾಗಿರಬೇಕಾಗುತ್ತದೆ. ಈ ನಿಟ್ಟಿನಲ್ಲಿ ಪ್ರತಿ ಭಾರತೀಯನು ಆರ್ಥಿಕತೆ ಅರಿತಾಗ ಮಾತ್ರ ಭಾರತದ ಆರ್ಥಿಕತೆ ಬಲಗೊಳ್ಳಲು ಸಾಧ್ಯವಾಗಬಹುದು.



**– ಮಹಾಂತೇಶ ಎ.**
**ದಲಿತ ವಿದ್ಯಾರ್ಥಿ ಪರಿಷತ್,**
**ಗದಗ.**

### ಕನ್ನಡಿಗರ ಜಾಗೃತಿ ಸಮಾವೇಶ, ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ನಿಂಗರಾಜಗೌಡ್ರ

# ಕರ್ನಾಟಕದಲ್ಲಿ ಕನ್ನಡಿಗನೇ ಸಾರ್ವಭೌಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕದಲ್ಲಿ ಕನ್ನಡಿಗನೇ ಸಾರ್ವಭೌಮನಾಗಿದ್ದು, ಕನ್ನಡಿಗರಿಗೆ ಶೈಕ್ಷಣಿಕ, ಆರ್ಥಿಕ ಇತ್ಯಾದಿ ವಿವಿಧ ಕ್ಷೇತ್ರಗಳಲ್ಲಿ ಅಭಿವೃದ್ಧಿ ಹೊಂದಬೇಕಾದರೆ ಕನ್ನಡಿಗರು ಜಾಗೃತರಾಗಿ ಸಂಘಟಿತರಾಗಬೇಕಾಗಿದೆ. ಹೊರ ರಾಜ್ಯದಿಂದ ಬಂದ ಉದ್ಯಮಿಗಳು ಕನ್ನಡಿಗರಿಗೆ ಉದ್ಯೋಗ ನೀಡುವುದರಲ್ಲಿ ತಾತ್ಸಾರ ಭಾವನೆ ಹೊಂದಿದ್ದಾರೆ. ಆದ್ದರಿಂದ ಕನ್ನಡಿಗರು ಜಾಗೃತರಾಗಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ರಾಜ್ಯಾಧ್ಯಕ್ಷ ನಿಂಗರಾಜಗೌಡ್ರ ಹೇಳಿದರು.

ಅವರು ಗದಗ ನಗರದ ಡಾ. ಬಾಬು ಜಗಜೀವನರಾಂ ಸಭಾಭವನದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಗದಗ ಜಿಲ್ಲಾ ಘಟಕದ ಆಶ್ರಯದಲ್ಲಿ ಕನ್ನಡಿಗರ ಜಾಗೃತಿ ಸಮಾವೇಶ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸಲಾಯಿತು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಉಡಚಪ್ಪ ಹಳ್ಳಿಕೇರಿ, ರಾಜ್ಯ ಕಾರ್ಯಾಧ್ಯಕ್ಷ ರಾಮು ತಳವಾರ, ಸುರೇಶ್ ಗಾಂಧಿ, ಪುನೀತ್ ಕವಡೆ, ಧಾರವಾಡ ಜಿಲ್ಲಾಧ್ಯಕ್ಷ ವಿಜಯ ಪುಟ್ಟಣ್ಣನವರ, ಗದಗ ಜಿಲ್ಲಾ ಕಾರ್ಯಾಧ್ಯಕ್ಷ ಇಸ್ಮಾಯಿಲ್ ಅಡೂರ, ಜಿಲ್ಲಾ ಉಪಾಧ್ಯಕ್ಷ ಅಜಯ್ ಕಂಬಳಿ, ಜಿಲ್ಲಾ ರೈತ ಘಟಕದ ಅಧ್ಯಕ್ಷ ಮುತ್ತಣ್ಣ ಮುಂಡವಾಡ, ಲಕ್ಷ್ಮೇಶ್ವರ ತಾಲೂಕಾಧ್ಯಕ್ಷ ನಾಗೇಶ ಅಮರಾಪುರ, ಶಿರಹಟ್ಟಿ ತಾಲೂಕಾಧ್ಯಕ್ಷ ವೀರೇಶ ಪಸಾರದ, ನರಗುಂದ ತಾಲೂಕಾಧ್ಯಕ್ಷ ವಿನಾಯಕ ಚತ್ರಬಾವಿ, ಗದಗ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಆಶಾ ಉಳ್ಳಾಗಡ್ಡಿ, ನರಗುಂದ ಮಹಿಳಾ ಘಟಕದ ಅಧ್ಯಕ್ಷೆ ಕಾವ್ಯ ಹುಂಬಿ, ಲಕ್ಷ್ಮೇಶ್ವರ ಮಹಿಳಾ ಘಟಕದ ಅಧ್ಯಕ್ಷೆ ಜ್ಯೋತಿ ವಿಜಯ ಸೋಮನಾಥ, ಜರಿನಾ ಮುಲ್ಲಾ, ಮುತ್ತಣ್ಣ ಗಡೆಪ್ಪನವರ, ಮಂಜಪ್ಪ ದೇಸಹಳ್ಳಿ, ಮೈನುದ್ದಿನ ಮನಿಯಾರ, ಬಸವರಾಜ ವಡವಿ ಮುಂತಾದವರು ಉಪಸ್ಥಿತರಿದ್ದರು. ನಾಗೇಶ ಅಮರಾಪುರ ಸ್ವಾಗತಿಸಿದರು. ಉಡಚಪ್ಪ ಹಳ್ಳಿಕೇರಿ ಕಾರ್ಯಕ್ರಮ ನಿರೂಪಿಸಿದರು.




ಗದಗ ಜಿಲ್ಲಾಧ್ಯಕ್ಷ ಹಾಗೂ ಬೆಳಗಾವಿ ವಿಭಾಗದ ಅಧ್ಯಕ್ಷರಾದ ಶರಣು ಗೋಡಿ ಮಾತನಾಡಿ, ಕರ್ನಾಟಕದಲ್ಲಿ ರಾಜ್ಯವನ್ನಾಳಿದ ಅನೇಕ ಅರಸ ಮನೆತನಗಳು ನಮ್ಮದೇ ಮಾದರಿಯಾಗಿವೆ. ಕನ್ನಡದ ಇಮ್ಮಡಿ ಪುಲಕೇಶಿ, ಕೃಷ್ಣದೇವರಾಯ, ಕಿತ್ತೂರು ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ ಸೇರಿದಂತೆ ಅನೇಕರ ಸಾಧನೆಗಳನ್ನು ಕನ್ನಡಿಗರಿಗೆ ತಿಳಿಸುವ ಕಾರ್ಯವಾಗಬೇಕಾಗಿದೆ ಎಂದು ಹೇಳಿದರು.

### ಶ್ರೀ ವೀರಪ್ಪಜ್ಜನವರ ಜಾತ್ರಾ ಮಹೋತ್ಸವದ ಪುರಾಣ ಪ್ರವಚನದಲ್ಲಿ ಸತೀಶಕುಮಾರ

# ಸಂತರದು ತ್ಯಾಗಮಯ ಬದುಕು

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಈ ದೇಶದಲ್ಲಿ ಜನ್ಮ ತಾಳಿದ ಸಾಧು-ಸಂತರು ಎಂದಿಗೂ ಸ್ವಾರ್ಥದ ಬದುಕನ್ನು ಬದುಕಲಿಲ್ಲ. ಅವರದು ಯಾವಾಗಲೂ ತ್ಯಾಗಮಯ ಬದುಕು. ಅವರು ಈ ದೇಶದ ಉದ್ಧಾರಕ್ಕಾಗಿಯೆ ಬದುಕಿದರೆ ಹೊರತು ಎಂದಿಗೂ ತಮಗಾಗಿ, ತಮ್ಮ ಉದ್ಧಾರಕ್ಕಾಗಿ ಬದುಕಿಲ್ಲ. ಅಂತಹ ಮಹಾಮಹಿಮರಲ್ಲಿ ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರೂ ಒಬ್ಬರು ಎಂಬುದನ್ನು ಕೇಳಿ ತಿಳಿದು ಬಹಳಷ್ಟು ಆನಂದವಾಗಿದೆ ಎಂದು ಆರ್‌ಎಸ್‌ಎಸ್‌ನ ಪ್ರಾಂತ ಕಾರ್ಯಕಾರಿಣಿ ಸದಸ್ಯ ಸತೀಶಕುಮಾರ ಹೇಳಿದರು. ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಜಾತ್ರಾ ಮಹೋತ್ಸವದ ನಿಮಿತ್ತ ನಡೆದ 5ನೇ ದಿನದ ಪುರಾಣ ಪ್ರವಚನದಲ್ಲಿ ಅವರು 'ಭಾರತ ವಿಶ್ವಗುರು' ವಿಷಯದ ಕುರಿತು ಮಾತನಾಡಿದರು. ಭಾರತದಲ್ಲಿನ ಕುಟುಂಬ ಪದ್ಧತಿ ಜಗತ್ತಿನ ಎಲ್ಲರಿಗೂ ಪ್ರಿಯವಾಗಿದೆ. ನಮ್ಮ ಪರಂಪರೆಯನ್ನು ನಾವಷ್ಟೇ ಅನುಭವಿಸದೆ ಅದನ್ನು ಇತರರೊಂದಿಗೆ ಹಂಚಿಕೊಂಡು ಎಲ್ಲರೂ ಸುಖವಾಗಿರಲಿ ಎಂಬ ಆಶಯವನ್ನು ತೋರಿಸಿದವರು ಭಾರತೀಯರು. ಹೀಗಾಗಿ ಭಾರತ ಎಂದಿಗೂ ತನ್ನ ಸ್ವಂತ ಸುಖವನ್ನು ಬಯಸಿದ ದೇಶವಾಗಿಲ್ಲ ಎಂದರು.

ಬಹುತೇಕ ಎಲ್ಲರೂ ಭಾರತ ಅಜ್ಞಾನದ ರಾಷ್ಟ್ರ, ಬಡತನದ ರಾಷ್ಟ್ರ, ಇಂಗ್ಲೀಷ್‌ನ ಗಾಳಿ ಗಂಧವೇ ಇಲ್ಲದ ರಾಷ್ಟ್ರ ಎಂದೆಲ್ಲ ಪ್ರಚಾರ ಮಾಡಿ ಭಾರತದ ಮಾನವನ್ನು ಹರಾಜು ಹಾಕಿದ್ದಾರೆ. ಜಗತ್ತಿನವರ ಕಣ್ಣಿನಲ್ಲಿ ನಮ್ಮನ್ನು ಸಣ್ಣವರನ್ನಾಗಿಸಿದ್ದಾರೆ. ಆದರೆ ವಿವೇಕಾನಂದರು ಭಾರತ ಎಂದರೇನು, ಭಾರತದ ಶ್ರೇಷ್ಠತೆ ಏನು, ಭಾರತದ ಜ್ಞಾನ-ವಿಜ್ಞಾನ ಅದೆಷ್ಟು ಎತ್ತರದ ಮಟ್ಟದಲ್ಲಿದೆ ಎಂಬುದನ್ನು ಜಗತ್ತಿಗೆ ತೋರಿಸಿ, ನಮ್ಮನ್ನು ಶ್ರೇಷ್ಠರನ್ನಾಗಿ ಮಾಡುವುದರ ಜೊತೆಗೆ ಭಾರತ ಜಗತ್ತಿನ ವಿಶ್ವ ಗುರು ಎಂಬುದನ್ನು ಸಾರಿ ಹೇಳಿದರು. ಇಂತಹ ಮಹಾಮಹಿಮರು ಕಾಲಕಾಲಕ್ಕೆ ಭರತ ಭೂಮಿಯಲ್ಲಿ ಜನಿಸಿರುವ್ಯದರಿಂದಲೇ ಯಾರು ಏನೇ ಮಾಡಿದರೂ ಭಾರತವನ್ನು ಬಗ್ಗಿಸುವುದಕ್ಕೆ ಸಾಧ್ಯವಾಗಿಲ್ಲ ಎಂದರು.

ವೇದಿಕೆಯ ಮೇಲೆ ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ. ಎಂ.ಸಿ. ಚಪ್ಪನ್ನಮಠ, ನಿವೃತ್ತ ಶಿಕ್ಷಕ ಎಂ.ಎ. ಹಿರೆವಡೆಯರ, ಪ್ರವಚನಕಾರ ಡಾ. ವಿಶ್ವನಾಥ ಸ್ವಾಮೀಜಿ ಮುಂತಾದವರಿದ್ದರು.




ಭಾರತ ದೇಶದಲ್ಲಿನ ಜ್ಞಾನ, ವಿಜ್ಞಾನ, ನಾಗರಿಕತೆ ಎಂದಿಗೂ ಭವ್ಯವಾದದ್ದು. ಇದನ್ನು ಅನುಸರಿಸಲು ಸಾಧ್ಯವಾಗದೆ ನಾವು ಇದೀಗ ಪಾಶ್ಚಾತ್ಯ ಸಂಸ್ಕೃತಿಯತ್ತ ಮುಖ ಮಾಡಿದ್ದೇವೆ. ಇದರಿಂದ ನಾವು ನಮ್ಮತನವನ್ನು ಕಳೆದುಕೊಂಡು ಇತರರಿಗೆ ದಾಸರಾಗುವ ಹಂತಕ್ಕೆ ಬಂದಿದ್ದೇವೆ. ಇದು ಅತ್ಯಂತ ವಿಷಾದನೀಯ ಎಂದು ಸತೀಶಕುಮಾರ ಅಭಿಪ್ರಾಯಪಟ್ಟರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಅಪೇರಲ್ ಟ್ರೇನಿಂಗ್ ಅಂಡ್ ಡಿಸೈನ್ ಸೆಂಟರ್, ಕೌಶಲ್ಯ ವಿಕಾಸ ಮತ್ತು ಉದ್ಯಮಶೀಲತಾ ಮಂತ್ರಾಲಯ ಇವರ ಸಹಭಾಗಿತ್ವದಲ್ಲಿ ಕಐವಿಗಿಜ 4.0 ಯೋಜನೆಯಡಿ ಎಲ್ಲ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳಾದ 6 ತಿಂಗಳ (570 ಗಂಟೆಗಳ) ಅವಧಿಯ ಫ್ಯಾಷನ್ ಡಿಸೈನರ್ ಉಚಿತ ಹೊಲಿಗೆ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವವರು ಗದಗ ಜಿಲ್ಲೆಯ ನಿವಾಸಿಯಾಗಿರಬೇಕು, 20 ರಿಂದ 40 ವಯೋಮಾನದವರಾಗಿರಬೇಕು, ಕನಿಷ್ಠ 12ನೇ ತರಗತಿ/ಐಟಿಐ/ಡಿಪ್ಲೋಮಾ ಪಾಸಾಗಿರಬೇಕು. ಎಲ್ಲ ಹಿಂದುಳಿದ ವರ್ಗಕ್ಕೆ ಸೇರಿದ ಮೇಲಿನ ಅರ್ಹತೆಯನ್ನು ಹೊಂದಿರುವ ಆಸಕ್ತ ಅಭ್ಯರ್ಥಿಗಳು ಅಪೇರಲ್ ಟ್ರೇನಿಂಗ್ ಅಂಡ್ ಡಿಸೈನ್ ಸೆಂಟರ್ (ಎ.ಟಿ.ಡಿ.ಸಿ) 1ನೇ ಮಹಡಿ, ಕುಷ್ಟಗಿ ಬಿಲ್ಡಿಂಗ್, ಪಾಲಾ-ಬದಾಮಿ ರಸ್ತೆ ಬೆಟಗೇರಿ-ಗದಗ,

ಈ ವಿಳಾಸಕ್ಕೆ ತಿಳಿಸಲಾದ (ದೃಢೀಕೃತ) ದಾಖಲಾತಿಗಳ 4 ಪ್ರತಿಗಳೊಂದಿಗೆ ಹಾಗೂ ಇತ್ತೀಚಿನ 6 ಭಾವಚಿತ್ರದೊಂದಿಗೆ ಫೆಬ್ರವರಿ 22 ಒಳಗಾಗಿ ಸಂಪರ್ಕಿಸಿ ನಿಗದಿತ ನಮೂನೆಯಲ್ಲಿ ಖುದ್ದಾಗಿ ಅರ್ಜಿಯನ್ನು ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9844236030/9606640980 ಸಂಪರ್ಕಿಸಬಹುದು.

# ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿಗೆ ಸಹಕಾರ ಇಲಾಖೆಯಿಂದ ಜಾರಿಗೊಳಿಸಿದ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿಯಲ್ಲಿ ಹೊಸದಾಗಿ ಸದಸ್ಯರನ್ನು ನೊಂದಾಯಿಸಲು ಮತ್ತು ಕಳೆದ ಸಾಲಿನಲ್ಲಿ ನೊಂದಾಯಿಸಿದ ಸದಸ್ಯರನ್ನು ನವೀಕರಿಸುವ ಅವಧಿಯನ್ನು ಮಾರ್ಚ್ 31 ರವರೆಗೆ ವಿಸ್ತರಿಸಲಾಗಿದೆ. ಸಹಕಾರ ಸಂಘ/ಸೌಹಾರ್ದ ಸಹಕಾರಿಗಳು/ಸಹಕಾರ ಬ್ಯಾಂಕ್‌ಗಳು ಮತ್ತು ಗ್ರಾಮೀಣ ಸ್ವ-ಸಹಾಯ ಗುಂಪುಗಳಲ್ಲಿರುವ ಸದಸ್ಯರು ಕನಿಷ್ಠ 03 ತಿಂಗಳುಗಳ ಮುಂಚೆ ಸದಸ್ಯತ್ವವನ್ನು ಹೊಂದಿರಬೇಕು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಸದಸ್ಯರಿಗೆ ನೊಂದಾಯಿಸಲು ಉಚಿತವಾಗಿರುತ್ತದೆ ಈ ಯೋಜನೆಯ ಸೌಲಭ್ಯವನ್ನು ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ-125 ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಎ.ಪಿ.ಎಂ.ಸಿ. ಯಾರ್ಡ್, ಎಸ್.ಬಿ.ಆಯ್ ಮುಖ್ಯ ಶಾಖೆ ಎದುರಿಗೆ, ಗದಗ ದೂರವಾಣಿ ಸಂಖ್ಯೆ-08372-238598, ಹಾಗೂ ತಾಲೂಕು ಸಹಕಾರ ಅಭಿವೃದ್ಧಿ ಅಧಿಕಾರಿ, ನರಗುಂದ-8660099227, ಶಿರಹಟ್ಟಿ-9739247088, ರೋಣ-9538198110, ಮುಂಡರಗಿ-8088386791, ಗದಗ-9945187724 ಇವರನ್ನು ಸಂಪರ್ಕಿಸಬಹುದಾಗಿದೆ.

# ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಾತ್ರಾ ಮಹೋತ್ಸವಕ್ಕೆ ತೆರಳುವ ಭಕ್ತಾಧಿಗಳು ಅಧಿಕ ಸಂಖ್ಯೆಯಲ್ಲಿ ಎತ್ತಿನಗಾಡಿ/ಎತ್ತಿನಬಂಡಿ ಹಾಗೂ ಕುದರೆಗಾಡಿಗಳನ್ನು ತೆಗೆದು-ಕೊಂಡು ಜಾತ್ರೆಗೆ ಹೋಗಿ ಈ ಎತ್ತಿನಗಾಡಿ/ಎತ್ತಿನಬಂಡಿ ಹಾಗೂ ಕುದರೆಗಾಡಿಗೆ ಕಟ್ಟಿರುವ ಎತ್ತು, ಕುದುರೆ ಹಾಗೂ ಬೇರೆ ಬೇರೆ ಪ್ರಾಣಿಗಳಿಗೆ ಮದ್ದು ಬರುವ ಔಷಧ ನೀಡಿ ಅವುಗಳಿಗೆ ಮನಬಂದಂತೆ ರಸ್ತೆಯಲ್ಲಿ ಓಡಾಡಿಸುತ್ತಾ ಹಾಗೂ ಅವುಗಳೊಂದಿಗೆ ಮೋಜು/ಮಸ್ತಿ ಮಾಡುತ್ತಾ ಮತ್ತು ಸಾರ್ವಜನಿಕರಿಗೆ ತೊಂದರೆ ಉಂಟು ಮಾಡುತ್ತಾ ಜನ ನಿಬಿಡ ಪ್ರದೇಶದಲ್ಲಿ ಪ್ರಾಣಿಗಳನ್ನು ಸ್ಪರ್ಧೆಯ ರೀತಿಯಲ್ಲಿ ಅಟ್ಟಾಡಿಸಿಕೊಂಡು ಹೋಗುವುದರ ಮೂಲಕ ಪ್ರಾಣಿಗಳಿಗೆ ಹಿಂಸೆ ಮಾಡುವುದು ಕಂಡು ಬಂದಿರುತ್ತದೆ. ಈ ರೀತಿ ಮಾಡುವವರ ವಿರುದ್ಧ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ರೋಣ ತಹಸೀಲ್ದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ಮುದ್ದು ವಿದ್ಯಾರ್ಥಿಗಳು ಎಂದರೆ ಸುಂದರ ಲೋಕದ ಪಕ್ಷಿಗಳಿದ್ದಂತೆ. ಅವರ ಶೈಕ್ಷಣಿಕ ಪ್ರಗತಿಗೆ ಪ್ರತಿಯೊಬ್ಬ ಪಾಲಕರು, ಗುರುವೃಂದ ಶ್ರಮಿಸಿದರೆ ದೇಶದ ಉತ್ತಮ ಪ್ರಜೆಯಾಗಿ ಹೊರಹೊಮ್ಮುತ್ತಾರೆ ಎಂದು ಜೆ.ಟಿ. ವಿದ್ಯಾಪೀಠದ ಕಾರ್ಯದರ್ಶಿ ಶಿವಾನಂದ ಪಟ್ಟಣಶೆಟ್ಟರ ಹೇಳಿದರು.

ಡಂಬಳ ಗ್ರಾಮದ ಶ್ರೀ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಗದಗ ಸಂಸ್ಥೆಯ ಅಧೀನದ ಬಸವೇಶ್ವರ ಆಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವದ ಮಕ್ಕಳ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಈ ಭಾಗದ ಕಪ್ಪತ್ತಗುಡ್ಡಕ್ಕೆ ಕಿಡಿಗೇಡಿಗಳು ಬೆಂಕಿ ಹಚ್ಚುತ್ತಿರುವುದು ವಿಷಾದಕರ ಸಂಗತಿ. ಕಪ್ಪತ್ತಗುಡ್ಡದ ರಕ್ಷಣೆ ಮಾಡಿಕೊಳ್ಳಬೇಕು. ಅಂದಾಗ ನಾವು-ನಿವೆಲ್ಲರೂ ಈ ಭಾಗದಲ್ಲಿ ಆರೋಗ್ಯಯುತವಾಗಿರಲು ಸಾಧ್ಯ ಎಂದರು.

ಪರಿಸರವಾದಿ ಗೋಣಿಬಸಪ್ಪ ಕೊರ್ಲಹಳ್ಳಿ ಮಾತನಾಡಿ, ಲಿಂ.ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಮತ್ತು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ವಿಚಾರಧಾರೆಯಂತೆ ಗ್ರಾಮೀಣ ವಿದ್ಯಾರ್ಥಿಗಳು ಕೂಡಾ ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳಬೇಕು ಎನ್ನುವ ಹಿನ್ನೆಲೆಯಲ್ಲಿ ಬಸವೇಶ್ವರ ಆಂಗ್ಲ ಮಾಧ್ಯಮ ಶಾಲೆ ಹತ್ತು ಹಲವು ಶೈಕ್ಷಣಕ ಚಟುವಟಿಕೆಯ ಮೂಲಕ ಉತ್ತಮ ಶಿಕ್ಷಣ ನೀಡುತ್ತಿರುವುದು ಪ್ರಶಂಸನೀಯ ಎಂದು ಹೇಳಿದರು.

ಕೊಟ್ರೇಶ ಮೆನಸನಿಕಾಯಿ, ವಿಜಯಕುಮಾರ ಮಾಲಗಿತ್ತಿ ಮಾತನಾಡಿದರು. ಮಕ್ಕಳ ಸಂಭ್ರಮ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಂದ ವಿವಿಧ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಕಾರ್ಯಕ್ರಮದಲ್ಲಿ ಜೆ.ಟಿ, ಮಠದ ವ್ಯವಸ್ಥಾಪಕರಾದ ಜಿ.ವಿ. ಹಿರೇಮಠ, ಗ್ರಾ.ಪಂ ಮಾಜಿ ಉಪಾಧ್ಯಕ್ಷ ಗವಿಸಿದ್ಧಪ್ಪ ಬಿಸನಳ್ಳಿ, ಮುಖ್ಯೋಪಾಧ್ಯಾ ಶಂಕರ ಕಲ್ಲಿಗನೂರ, ಸಂಜೋತಾ ಸಂಕಣ್ಣವರ, ಜ್ಯೋತಿ ಶಿರೂರ, ಧನಸಿಂಗ ರಾಠೋಡ, ಪ್ರಕಾಶ ತಳವಾರ, ಗೌರಮ್ಮ ಕೋತಂಬ್ರಿ, ನೇತ್ರಾ ಫರಂಗಿ, ಅನುರಾಧಾ ರಾಮೇನಳ್ಳಿ, ಶಶಿಕಲಾ, ಗೀತಾ ಕೊಳ್ಳಾರ, ಜಯಶ್ರೀ ಪತ್ತಾರ, ಚೈತ್ರಾ ತಳಕಲ್ಲ, ಸಿದ್ಧಮ್ಮ ಬಾವಿ, ಪಾಲಕರು, ಗ್ರಾಮಸ್ಥರು, ವಿದ್ಯಾರ್ಥಿಗಳು ಇದ್ದರು.

### ಶ್ರೀ ವೀರಪ್ಪಜ್ಜನವರ ಶತಮಾನದ ಜಾತ್ರೆಗೆ ಸಂಪೂರ್ಣವಾಗಿ ಸಜ್ಜಾದ ನರೇಗಲ್ಲ-ಕೋಡಿಕೊಪ್ಪ

# ಗ್ರಾಮದಲ್ಲಿ ಮನೆಮಾಡಿದ ಸಂಭ್ರಮ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ಪಟ್ಟಣದ ಮಜಿರೆ ಗ್ರಾಮವಾದ ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಮಠದಲ್ಲಿ ಸಡಗರ ಸಂಭ್ರಮ ಮನೆ ಮಾಡಿದೆ. ಶ್ರೀ ವೀರಪ್ಪಜ್ಜನ ಭಕ್ತರೆಲ್ಲರೂ ಸೇರಿ ಈ ಸಾರೆ ಅಜ್ಜನ ಜಾತ್ರಾ ಮಹೋತ್ಸವವನ್ನು ಪುಣ್ಯಾರಾಧನೆಯ ಶತಮಾನೋತ್ಸವವನ್ನಾಗಿ ಆಚರಿಸುತ್ತಿದ್ದಾರೆ. ಶತಮಾನೋತ್ಸವದ ಕಾರ್ಯಗಳು ಕಳೆದ ಜ. 30ರಿಂದ ಪುರಾಣದೊಂದಿಗೆ ಪ್ರಾರಂಭಗೊಂಡಿದ್ದು, ನಾಳೆಗೆ ಪುರಾಣ ಪ್ರವಚನದ ಮಹಾ ಮಂಗಲ ಜರುಗಿ, ಸಂಜೆಗೆ ಮಹಾರಥೋತ್ಸವವು ನಡೆಯಲಿದೆ. ಈ ಮಹಾರಥೋತ್ಸವಕ್ಕೆ ನರೇಗಲ್ಲ-ಕೋಡಿಕೊಪ್ಪ ಸಂಪೂರ್ಣವಾಗಿ ಸಜ್ಜಾಗಿವೆ.

9 ದಿನಗಳ ಪರ್ಯಂತ ನಡೆಯುವ ಈ ಜಾತ್ರೆಗೆ ಭಕ್ತರು ನಾ ಮುಂದು ತಾ ಮುಂದು ಎಂದು ದೇಣಿಗೆಯನ್ನು ನೀಡುವುದರ ಜೊತೆಗೆ ರೊಟ್ಟಿ ಬುತ್ತಿಯನ್ನು



ಮೆರವಣಿಗೆಯ ಮೂಲಕ ತಂದು ಅರ್ಪಿಸುವುದು ಇಂದಿಗೂ ನಡೆದಿರುವುದು ಶ್ರೀ ವೀರಪ್ಪಜ್ಜನವರ ಲೀಲೆಗೆ ಸಾಕ್ಷಿಯಾಗಿದೆ. ಬೂಂದೆ, ಬಾದಾಮ ಪುರಿ, ಉದುರು ಸಜ್ಜಕ, ಶೇಂಗಾ ಹೋಳಿಗೆ, ಹೂರಣದ ಹೋಳಿಗೆ, ಖಡಕ್ ರೊಟ್ಟಿ, ಶೇಂಗಾ ಚಟ್ನಿ, ಘಮಘಮಿಸುವ ಸಾರು ಪ್ರಸಾದದ ರೂಪದಲ್ಲಿ ಭಕ್ತರ ಹೊಟ್ಟೆ ಸೇರುತ್ತಿದ್ದು, ಭಕ್ತರು ಏನು ತಿನ್ನಲಿ ಏನು ಬಿಡಲಿ ಎಂದು ಯೋಚಿಸುವಷ್ಟು ವಿವಿಧ ಬಗೆಯ ಖಾದ್ಯಗಳು ದೊರೆಯುತ್ತಿವೆ.

ನರೇಗಲ್ಲ ಪಟ್ಟಣ ಮತ್ತು ಕೋಡಿಕೊಪ್ಪ ಗ್ರಾಮಗಳಂತೂ ನೂತನ ಮದುವಣಗಿತ್ತಿಯಂತೆ ಶೃಂಗಾರಗೊಂಡಿವೆ. ಊರ ತುಂಬಾ ಹಾಕಿರುವ ಹೋರ್ಡಿಂಗ್ಸ್‌ಗಳು, ಬಂಟಿಂಗ್ಸ್‌ಗಳು, ಬ್ಯಾನರ್‌ಗಳು ನೋಡುಗರ ಕಣ್ಮನಗಳನ್ನು ಸೆಳೆಯುತ್ತಿವೆ. ಅಬ್ಬಿಗೇರಿ ರಸ್ತೆಯ ಕಡೆಯಿಂದ ಶ್ರೀ ವೀರಪ್ಪಜ್ಜನವರ ಮಠಕ್ಕೆ ಹೋಗುವ ರಸ್ತೆಗೆ ನಿರ್ಮಿಸಿರುವ ಸ್ವಾಗತ ಕಮಾನು ಭಕ್ತರ ಗಮನವನ್ನು ತನ್ನತ್ತ ಸೆಳೆಯುತ್ತಿದೆ. ಜಾತ್ರೆಗೆ ಬರುವವರೆಲ್ಲರೂ ಒಂದು ಕ್ಷಣ ಅಲ್ಲಿ ನಿಂತು ಅದನ್ನು ಕಣ್ತುಂಬಿಕೊಂಡೇ ಹೋಗುತ್ತಿರುವ ದೃಶ್ಯ ಸರ್ವೇಸಾಮಾನ್ಯವಾಗಿದೆ.

ಶುಕ್ರವಾರ ಮಧ್ಯಾಹ್ನ ಸಿದ್ನೇಕೊಪ್ಪ ಗ್ರಾಮದ ಸದ್ಭಕ್ತರು ತೇರಿನ ಹಗ್ಗವನ್ನು ಮೆರವಣಿಗೆಯಲ್ಲಿ ಶ್ರೀಮಠಕ್ಕೆ ತೆಗೆದುಕೊಂಡು ಬರುತ್ತಾರೆ. ಪಟ್ಟಣದ ದಿ. ಬಂದನಗೌಡ ಸಂಕನಗೌಡ್ರ ಇವರ ಮನೆಯಿಂದ ಕಳಸದ ಮೆರವಣಿಗೆಯು ಹೊರಡಲಿದ್ದು, ಅದು ಮಠವನ್ನು ತಲುಪಿದ ನಂತರ ಸಂಜೆ 5ಕ್ಕೆ ಶ್ರೀ ವೀರಪ್ಪಜ್ಜನವರ ಮಹಾರಥೋತ್ಸವವು ಲಕ್ಷಾಂತರ ಭಕ್ತರ ಜಯಘೋಷಗಳ ಮಧ್ಯೆ ಅತ್ಯಂತ ವಿಜೃಂಭಣೆಯಿಂದ ಜರುಗಲಿದೆ. ಜ. 8ರಂದು ಸಂಜೆ ನಡೆಯುವ ಲಘು ರಥೋತ್ಸವದೊಂದಿಗೆ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವ ಮತ್ತು ಮಹಾರಥೋತ್ಸವಕ್ಕೆ ತೆರೆ ಬೀಳಲಿದೆ.

ಚಿಣ್ಣರ ಮನ ತಣಿಸಲು, ದೊಡ್ಡವರನ್ನು ಚಿಕ್ಕವರನ್ನಾಗಿಸಿ ಮನರಂಜನೆ ನೀಡಲು ಬ್ರೇಕ್ ಡ್ಯಾನ್ಸ್ ಮತ್ತು ಕೋಲಂಬಸ್‌ಗಳ ಆಗಮನವೂ ಆಗಿದೆ. ಇದು ಗ್ರಾಮೀಣ ಭಾಗವಾಗಿರುವದರಿಂದ ಇಲ್ಲಿ ಪ್ರವೇಶಕ್ಕೆ ಹೆಚ್ಚಿನ ದುಡ್ಡನ್ನು ಇಡದೆ ಕೈಗೆಟಕುವ ದರದಲ್ಲಿ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಸಂಯೋಜಕ ಮಂಜುನಾಥ ಹೇಳಿದರು.ತ

### ಆಂಧ್ರ-ಕರ್ನಾಟಕ ಪೊಲೀಸರ ಜಂಟಿ ಕಾರ್ಯಾಚರಣೆ

## 1 ಕೋಟಿ ಮೌಲ್ಯದ ರಕ್ತ ಚಂದನ ವಶಕ್ಕೆ

■ವಿಜಯಸಾಕ್ಷಿ ಸುದ್ದಿ, ಆಂಧ್ರ

ರಕ್ತ ಚಂದನ (ರೆಡ್ ಸ್ಯಾಂಡಲ್) ಕಳ್ಳಸಾಗಣೆ ವಿರುದ್ಧದ ಪ್ರಮುಖ ಕಾರ್ಯಾಚರಣೆ ನಡೆದಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯ ತಿರುಮಲಶೆಟ್ಟಿಹಳ್ಳಿ ಪೊಲೀಸರು ಕಟ್ಟಿಗೇನಹಳ್ಳಿ ಗ್ರಾಮದಿಂದ ಅಕ್ರಮವಾಗಿ ಸಂಗ್ರಹಿಸಿದ್ದ 180 ಅಕ್ರಮ ಮರದ ದಿಮ್ಮಿಗಳನ್ನು ವಶಪಡಿಸಿಕೊಂಡಿದ್ದಾರೆ.

ಕಳ್ಳಸಾಗಣೆದಾರರು ಪೊಲೀಸರಿಂದ ತಪ್ಪಿಸಿಕೊಳ್ಳುವ ಪ್ರಯತ್ನದಲ್ಲಿ ನೀಲಗಿರಿ ತೋಪಿನಲ್ಲಿ ರಕ್ತ ಚಂದನ ಮರವನ್ನು ಬಚ್ಚಿಟ್ಟಿದ್ದರು. ವಶಪಡಿಸಿಕೊಂಡ ದಿಮ್ಮಿಗಳ ಮೌಲ್ಯ ಸುಮಾರು 1 ಕೋಟಿ ಎಂದು ಅಂದಾಜಿಸಲಾಗಿದೆ.

# ನರೇಗಾದಿಂದ ಗ್ರಾಮಗಳಲ್ಲಿ ಮೂಲಭೂತ ಸೌಲಭ್ಯ

■ವಿಜಯಸಾಕ್ಷಿ ಸುದ್ದಿ, ರೋಣ

ಉದ್ಯೋಗ ಖಾತರಿ ಯೋಜನೆಯಡಿ ನಡೆಸಲಾಗುವ ಕೆಲಸಗಳು ಗ್ರಾಮದ ಜನರ ಮನಸ್ಸಿನಲ್ಲಿ ಉಳಿಯುವಂತಿರಬೇಕು. ಗುರಿ ಸಾಧನೆಯ ಜೊತೆಗೆ ಗ್ರಾಮದ ಅಭಿವೃದ್ಧಿಯಲ್ಲಿ ಶಾಶ್ವತವಾಗಿರುವ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಅಭಿಪ್ರಾಯಪಟ್ಟರು.



ತಾ.ಪಂ ಸಭಾಭವನದಲ್ಲಿ ಆಚರಿಸಲಾದ ನರೇಗಾ ದಿವಸ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನರೇಗಾ ಯೋಜನೆಯು ಮೊದಲು ಜನರಿಗೆ ಉದ್ಯೋಗವನ್ನು ಮಾತ್ರ ಕೊಡುವ ಕೆಲಸವನ್ನು ಮಾಡುತ್ತಿತ್ತು. ಅದಾದ ಬಳಿಕ 2013 ಗ್ರಾಮಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕೆಲಸ ಮಾಡಲಾಯಿತು. ಅಂದಿನಿಂದ ಗ್ರಾಮಗಳು ಅಭಿವೃದ್ಧಿ ಹೊಂದಲು ನರೇಗಾ ಮುಖ್ಯ ಕಾರಣವಾಗುತ್ತಿದೆ. ಸದ್ಯ ಗ್ರಾಮಗಳಲ್ಲಿ ಗುಣಮಟ್ಟದ ಆಸ್ತಿ ಸೃಜನೆ ಮಾಡುವುದು ನಮ್ಮ-ನಿಮ್ಮೆಲ್ಲರ ಕೆಲಸ ಎಂದರು.

ಸರಕಾರ ಜಾರಿಗೆ ತಂದ ಯಾವುದೇ ಯೋಜನೆ ಯಶಸ್ವಿಯಾಗುವಲ್ಲಿ ಸಮರ್ಥ ಕಾರ್ಯಪಡೆಯ ಪಾತ್ರ ಬಹುಮುಖ್ಯವಾಗುತ್ತದೆ. ಸರಕಾರಿ ವ್ಯವಸ್ಥೆಯಲ್ಲಿ ಯೋಜನೆಗಳ ಯಶಸ್ಸಿಗೆ ಸರಕಾರಿ ಅಧಿಕಾರಿಗಳು, ನೌಕರರ ಜತೆಗೆ ಆಯಾ ಯೋಜನೆಯ ಸಿಬ್ಬಂದಿಯ ಸಹಕಾರ ಬೇಕಾಗಿರುತ್ತದೆ. ಅದು ನಮ್ಮ ತಾ.ಪಂ ಹಾಗೂ ಗ್ರಾ.ಪಂಗಳಲ್ಲಿ ಉತ್ತಮ ರೀತಿಯಲ್ಲಿ ಸಿಗುತ್ತಿದೆ ಎಂದರು.

ನರೇಗಾ ದಿನಾಚರಣೆ ಪ್ರಯುಕ್ತ ಪಟ್ಟಣದ ಡಾ. ಪಂಡಿತ ಭೀಮಸೇನ್ ಜೋಶಿ ಸಾರ್ವಜನಿಕ ಸರಕಾರಿ ಆಸ್ಪತ್ರೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಅವರ ನೇತೃತ್ವದಲ್ಲಿ ಬಡ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ತಾ.ಪಂ ಸಿಬ್ಬಂದಿಗಳು, ನರೇಗಾ ಸಿಬ್ಬಂದಿಗಳು ಸೇರಿದಂತೆ ಅನೇಕರು ಭಾಗವಹಿಸಿದ್ದರು.

### ಶಿರಹಟ್ಟಿಯಲ್ಲಿ ಸವಿತಾ ಜಯಂತಿ ಕಾರ್ಯಕ್ರಮದಲ್ಲಿ ಎಂ.ಕೆ. ಲಮಾಣಿ

# ಸವಿತಾ ಸಮಾಜದ ಕಾರ್ಯಸಾಧನೆ ಅನನ್ಯ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ನಾದಸ್ವರ, ನಾಟಿವೈದ್ಯ, ಕ್ಷೌರಿಕ ಸೇರಿದಂತೆ ಹತ್ತು ಹಲವಾರು ವೃತ್ತಿಗಳ ಮೂಲಕ ಸೇವಾಭಾವನೆಯಿಂದ ಸೇವೆಗೈಯುವ ಸವಿತಾ ಸಮಾಜದ ಕಾರ್ಯಸಾಧನೆ ಶ್ಲಾಘನೀಯವಾಗಿದ್ದು, ಕಾಯಕವೇ ಕೈಲಾಸ ಎಂಬ ಬಸವಣ್ಣನವರ ಉಕ್ತಿಯನ್ನು ಅಕ್ಷರಶಃ ಸವಿತಾ ಸಮಾಜದವರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದಾರೆ ಎಂದು ಕರ್ನಾಟಕ ಮಾಧ್ಯಮಿಕ ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕ ಅಧ್ಯಕ್ಷ ಎಂ.ಕೆ. ಲಮಾಣಿ ಹೇಳಿದರು.



ಮಂಗಳವಾರ ಪಟ್ಟಣದ ತಹಸೀಲ್ದಾರ್ ಕಾರ್ಯಾಲಯದ ಸಭಾಭವನದಲ್ಲಿ ಜರುಗಿದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿ, ದೇವದೇವತೆಗಳ ಆಯುಷ್ಕರ್ಮವನ್ನು ಮಾಡುತ್ತಿದ್ದ ಕ್ಷೌರಿಕ ಸಮಾಜದ ಮೂಲ ಪುರುಷ ಸವಿತಾ ಮಹಿರ್ಷಿ ಬ್ರಹ್ಮಜ್ಞಾನ ಸಂಪಾದನೆ ಜೊತೆಗೆ ಸಾಮವೇದದ ಹರಿಕಾರರಾಗಿದ್ದರು. ಅಂತಹ ಪುಣ್ಯಪುರುಷರ ಜಯಂತಿ ಕಾರ್ಯಕ್ರಮವನ್ನು ಸರ್ಕಾರದ ಅಡಿಯಲ್ಲಿ ಮಾಡುತ್ತಿರುವದು ಅತ್ಯಂತ ಸ್ತುತ್ಯಾರ್ಹ. ವೇದಗಳಲ್ಲಿ ಸವಿತಾ ಮಹರ್ಷಿಯನ್ನು ಸಾಮವೇದದ ಸೃಷ್ಟಿಕರ್ತ ಎಂದು ಕರೆಯುತ್ತಿದ್ದು, ಅಂತಹ ಮಹಾನ್ ಋಷಿಮುನಿಗಳ ಜಯಂತಿಯನ್ನು ರಥಸಪ್ತಮಿ ದಿನದಂದು ಸರ್ಕಾರದ ವತಿಯಿಂದ ಆಚರಿಸಲು ಮುಂದಾಗಿರುವುದು ಶ್ಲಾಘನೀಯ ಎಂದರು.

ಸವಿತಾ ಸಮಾಜದ ತಾಲೂಕಾ ಘಟಕ ಅಧ್ಯಕ್ಷ ನಾಗರಾಜ ಆರೆಪಲ್ಲಿ ಮಾತನಾಡಿ, ಸವಿತಾ ಎಂದರೆ ಜನ್ಮ ನೀಡಿದಾತ. ಗಾಯತ್ರಿ ಮಾತೆಯ ನಾಮದೊಂದಿಗೆ ಸವಿತಾ ಮಹರ್ಷಿ ಉನ್ನತ ಸ್ಥಾನವನ್ನು ಕಾಣಬಹುದು. ಬ್ರಹ್ಮಜ್ಞಾನವನ್ನು ಹೊಂದಿರುವ ಸವಿತಾ ಮಹರ್ಷಿ ಶಿವನ ಬಲಗಣ್ಣಿನ ಮೂಲಕ ಜನ್ಮತಾಳಿದಾತ ಎಂಬುದನ್ನು ಪುರಾಣಗಳಿಂದ ತಿಳಿಯಬಹುದು. ಅಂತಹ ಮಹಾನ್ ದಾರ್ಶನಿಕರ ಜೀವನ ಸಾಧನೆಯನ್ನು ಅರ್ಥ ಮಾಡಿಕೊಂಡು ಅವರ ತತ್ವಾದರ್ಶಗಳನ್ನು ನಾವೆಲ್ಲರೂ ಅರಿತುಕೊಳ್ಳಬೇಕಿದೆ ಎಂದರು.

ಇದೇ ಸಂದರ್ಭದಲ್ಲಿ ಸವಿತಾ ಸಮಾಜದ ಹಿರಿಯರಾದ ಸುಶೀಲಮ್ಮ ಆರೆಪಲ್ಲಿ ಹಾಗೂ ಪದ್ಮಾವತಿ ಬಾರ್ಬರ ಅವರನ್ನು ಸನ್ಮಾನಿಸಿ ಸತ್ಕರಿಸಲಾಯಿತು.

ವೆಂಕಟೇಶ ಅರೆಪಲ್ಲಿ, ನಾರಾಯಣ ಅರೆಪಲ್ಲಿ, ಲಕ್ಷ್ಮಣ ಬಾರ್ಬರ್, ಬಾಲರಾಜ ಕಲವರಾಲ, ಕರ್ನಾಟಕ ಪ್ರಜಾಪರ ವೇದಿಕೆ ತಾಲೂಕಾ ಘಟಕ ಅಧ್ಯಕ್ಷ ಹಸನ್ ತಹಸೀಲ್ದಾರ್, ಅಶೋಕ ವರವಿ, ಪ್ರಕಾಶ ಬಾರ್ಬರ, ಶ್ರೀಕಾಂತ ಬಾರ್ಬರ್, ಬಾಬಾಜಾನ ಕೋಳಿವಾಡ ಹಾಗೂ ಕಂದಾಯ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಪ್ರಸ್ತುತ ದಿನಮಾನದಲ್ಲಿ ಸವಿತಾ ಸಮಾಜ ಅತ್ಯಂತ ಹಿಂದುಳಿದ ಸಮಾಜವಾಗಿದ್ದು, ಸಮಾಜದ ಹಾಗೂ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಸರ್ಕಾರ ಅಗತ್ಯ ಕ್ರಮ ತೆಗೆದುಕೊಂಡು ಪ್ಯಾಕೇಜ್ ಘೋಷಣೆ ಮಾಡಬೇಕು. ಕ್ಷೌರಿಕ ಕುಟುಂಬ ಅತ್ಯಂತ ದಯನೀಯ ಸ್ಥಿತಿಯಲ್ಲಿ ಜೀವನ ನಿರ್ವಹಣೆ ಮಾಡುತ್ತಿದ್ದು, ಕಾರ್ಮಿಕರಿಗೆ ನೀಡುವ ಸೌಲಭ್ಯ ಹಾಗೂ ಸವಲತ್ತುಗಳನ್ನು ನೀಡಬೇಕು ಎಂದು ತಾಲೂಕಾ ಘಟಕ ಅಧ್ಯಕ್ಷ ನಾಗರಾಜ ಆರೆಪಲ್ಲಿ ಒತ್ತಾಯಿಸಿದರು.

### ಸಿಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಿದ ಶಾಸಕ ಡಾ. ಚಂದ್ರು ಲಮಾಣಿ

# ಗ್ರಾಮೀಣ ರಸ್ತೆ ಸುಧಾರಣೆಗೆ ಅಗತ್ಯ ಕ್ರಮ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮತಕ್ಷೇತ್ರ ವ್ಯಾಪ್ತಿಯ ಬಹುತೇಕ ಗ್ರಾಮೀಣ ಪ್ರದೇಶಗಳಲ್ಲಿಯ ರಸ್ತೆಗಳು ಹಾಳಾಗಿದ್ದು, ಇವುಗಳ ಸುಧಾರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಸೋಮವಾರ ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವೆಲಪ್‌ಮೆಂಟ್ ಲಿಮಿಟೆಡ್ ವತಿಯಿಂದ 50 ಲಕ್ಷ ರೂ ವೆಚ್ಚದಲ್ಲಿ ಗೋವನಕೊಪ್ಪ ಗ್ರಾಮದಲ್ಲಿ ಸಿಸಿ ರಸ್ತೆ ಹಾಗೂ ತಾರೀಕೊಪ್ಪ ಗ್ರಾಮದಲ್ಲಿ 50 ಲಕ್ಷ ರೂ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ ಚಾಲನೆ ನೀಡಿ ಮಾತನಾಡಿದರು.



ಸತತ ಮಳೆಯಿಂದ ಹಾಗೂ ಸಮರ್ಪಕ ನಿರ್ವಹಣೆ ಮಾಡದೇ ಇರುವುದರಿಂದ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬಹುತೇಕ ಗ್ರಾಮೀಣ ಪ್ರದೇಶಗಳಲ್ಲಿ ಹಾಳಾಗಿದ್ದು, ಸಾರ್ವಜನಿಕರ ಸಂಚಾರಕ್ಕೆ ತೆ-ಂದರೆಯಾಗುತ್ತಿತ್ತು. ಈ ಕುರಿತು ಸಂಬಂಧಿಸಿದ ಇಲಾಖೆಯ ಮೇಲಾಧಿಕಾರಿಗಳ ಮತ್ತು ಸರಕಾರದ ಗಮನಕ್ಕೆ ತರಲಾಗಿತ್ತು. ಇದೀಗ ಹಂತ ಹಂತವಾಗಿ ವಿವಿಧ ಇಲಾಖೆಗಳಿಗೆ ಅನುದಾನ ಬಿಡುಗಡೆ-ಯಾಗುತ್ತಿದ್ದು, ಹಾಳಾದ ರಸ್ತೆಗಳ ಸುಧಾರಣೆ ನಡೆಯುತ್ತಿದೆ. ಇಂತಹ ಅಭಿವೃದ್ಧಿ ಕೆಲಸಗಳಿಗೆ ಸ್ಥಳೀಯ ಸಾರ್ವಜನಿಕರು ಸಹಕಾರ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಗುರಪ್ಪ ಕಬ್ಬೇರಳ್ಳಿ, ಹನುಮಂತ ಕಬ್ಬೇರಳ್ಳಿ, ಅಪ್ಪಣ್ಣ ಸಾಲಿ, ಅಜ್ಜಪ್ಪ ಭಜಂತ್ರಿ, ಶಂಕರ ಭಾವಿ, ರಾಜೀವ್‌ರೆಡ್ಡಿ ಬಮ್ಮನಕಟ್ಟಿ, ಪ್ರವೀಣಗೌಡ ಪಾಟೀಲ, ಭೀಮಣ್ಣ ಇಮ್ಮಡಿ, ಫಕ್ಕೀರೇಶ ತಳ್ಳಳ್ಳಿ, ಭೀಮನಗೌಡ ಪಾಟೀಲ, ಸುರೇಶ ತಳ್ಳಳ್ಳಿ, ರವಿ ದುನ್ನೂರು, ವಿಜಯಾನಂದ ಪಾಟೀಲ, ರಾಘು ಗೋಡ್ಕೊಟ್ಟಿ, ಕುಮಾರ ಕಬ್ಬೇರಳ್ಳಿ, ಪ್ರೇಮಕುಮಾರ ಮೇಲಿನಮನಿ, ಸುರೇಶಗೌಡ ಪಾಟೀಲ, ಹನುಮರಡ್ಡಿ ಬುಳ್ಳಪ್ಪನವರ, ಶಂಕ್ರಪ್ಪ ನೀರಲಗಿ, ಈರಣ್ಣ ಮಾಗಳದ, ಗುಡದಯ್ಯ ಸೂರಣಗಿ, ಭೀಮಪ್ಪ ಲಮಾಣಿ, ಪೂರಪ್ಪ ಲಮಾಣಿ, ಪ್ರಶಾಂತ ಕರೆಯತ್ತಿನ ಮುಂತಾದವರು ಉಪಸ್ಥಿತರಿದ್ದರು.

ಭಾರತ ದೇಶದಲ್ಲಿನ ಜ್ಞಾನ, ವಿಜ್ಞಾನ, ನಾಗರಿಕತೆ ಎಂದಿಗೂ ಭವ್ಯವಾದದ್ದು. ಇದನ್ನು ಅನುಸರಿಸಲು ಸಾಧ್ಯವಾಗದೆ ನಾವು ಇದೀಗ ಪಾಶ್ಚಾತ್ಯ ಸಂಸ್ಕೃತಿಯತ್ತ ಮುಖ ಮಾಡಿದ್ದೇವೆ. ಇದರಿಂದ ನಾವು ನಮ್ಮತನವನ್ನು ಕಳೆದುಕೊಂಡು ಇತರರಿಗೆ ದಾಸರಾಗುವ ಹಂತಕ್ಕೆ ಬಂದಿದ್ದೇವೆ. ಇದು ಅತ್ಯಂತ ವಿಷಾದನೀಯ ಎಂದು ಸತೀಶಕುಮಾರ ಅಭಿಪ್ರಾಯಪಟ್ಟರು.

## ಸರ್ವಮೂಲ ಗ್ರಂಥಗಳ ಸಂಭ್ರಮದ ಮೆರವಣಿಗೆ



■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀಮನ್ಮಧ್ವ ನವರಾತ್ರೋತ್ಸವ ನಿಮಿತ್ತ ಗದಗ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಶ್ರೀ ವಿಶ್ವ ಮಧ್ವ ಮಹಾ ಪರಿಷತ್ ಗದಗ ಶಾಖೆ ವತಿಯಿಂದ ನಡೆಯುತ್ತಿರುವ ಕಾರ್ಯಕ್ರಮದಲ್ಲಿ ಫೆ. 6ರ ಗುರುವಾರ ಮಧ್ವನವಮಿ ನಿಮಿತ್ತ ಬೆಳಿಗ್ಗೆ ಶ್ರೀ ಮದಾಚಾರ್ಯರ ಪ್ರತಿಮೆ ಹಾಗೂ ಸರ್ವಮೂಲ ಗ್ರಂಥಗಳ ಭವ್ಯ ಮೆರವಣಿಗೆ ನೆರೆದ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಕಾರ್ಯಕ್ರಮದಲ್ಲಿ ಹರೇಶ್ರೀನಿವಾಸ ಭಜನಾ ಮಂಡಳಿ, ರುಕ್ಮಿಣಿ ಭಜನಾ ಮಂಡಳಿ, ಲಕ್ಷ್ಮೀ ನಾರಾಯಣ ಭಜನಾ ಮಂಡಳಿ ಹಾಗೂ ಹರಿಪ್ರಿಯಾ ಭಜನಾ ಮಂಡಳಿ ಸದಸ್ಯರು ಹಾಗೂ ಶ್ರೀ ದೇವಸ್ಥಾನ ವಿಶ್ವಸ್ಥ ಮಂಡಳಿ ಸದಸ್ಯರು, ರಾಘವೇಂದ್ರ ಉತ್ಸವ ಮಂಡಳಿ, ಶ್ರೀ ವೀರನಾರಾಯಣ ಯುವಕ ಮಂಡಳಿ, ಮಹಾಲಕ್ಷ್ಮಿ ಯುವತಿ ಮಂಡಳ, ಶ್ರೀ ಲಕ್ಷ್ಮೀ ನಾರಾಯಣ ಮಹಿಳಾ ಮಂಡಳದ ಸದಸ್ಯರು ಪಾಲ್ಗೊಂಡಿದ್ದರು.

## ವಾರ್ಷಿಕ ಸಂಭ್ರಮ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಲಕ್ಮ್ಮೇಶ್ವರ

ಪಟ್ಟಣದ ಮಾಂತೇಶ ನಗರದಲ್ಲಿರುವ ಬಿಸಿಎನ್ ಸ್ಪೆಕ್ಟ್ರಮ್ ಇಂಗ್ಲೀಷ್ ಮೀಡಿಯಂ ಸ್ಕೂಲ್‌ನ 30ನೇ ವಾರ್ಷಿಕೋತ್ಸವ ಮತ್ತು 2025ರ ವಾರ್ಷಿಕ ಸಂಭ್ರಮ ಕಾರ್ಯಕ್ರಮ ಫೆ.9 ಮತ್ತು 10 ರಂದು ಜರುಗಲಿದೆ.

ಫೆ.9ರ ಬೆಳಿಗ್ಗೆ 11ಕ್ಕೆ ಪಾಲಕರ ಹಬ್ಬ ಮತ್ತು ಬಹುಮಾನ ವಿತರಣೆ ಕಾರ್ಯಕ್ರಮ ಜರುಗುವುದು. ಅಧ್ಯಕ್ಷತೆಯನ್ನು ಸಂಸ್ಥೆಯ ಮುಖ್ಯಸ್ಥರಾದ ಪ್ರಶಾಂತ ನೆಲವಗಿ ವಹಿಸುವರು. ಮುಖ್ಯ ಅತಿಥಿಗಳಾಗಿ ದೈಹಿಕ ಶಿಕ್ಷಣ ಅಧಿಕಾರಿ ಎಂ.ಎಂ. ಹವಳದ, ಬಿಆರ್‌ಪಿ ಈಶ್ವರ ಮೆಡ್ಲೇರಿ, ಸಿಆರ್‌ಪಿ ಸತೀಶ ಬೋಮಲೆ, ಉಮೇಶ ನೇಕಾರ, ಸಂಸ್ಥೆಯ ನಿರ್ದೇಶಕರಾದ ಶಿಲ್ಪಾ ಪಿ.ನೆಲವಗಿ, ನಾಗರಾಜ ಕುಲಕರ್ಣಿ ಪಾಲ್ಗೊಳ್ಳುವರು.

ಫೆ.10ರಂದು ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ಜರುಗುವುದು. ಮುಖ್ಯ ಅತಿಥಿಗಳಾಗಿ ಶಾಸಕ ಡಾ. ಚಂದ್ರು ಲಮಾಣಿ, ಡಿಡಿಪಿಐ ಆರ್.ಎಸ್. ಬುರಡಿ, ಬಿಇಓ ಹೆಚ್.ಎನ್. ನಾಯಕ ಮತ್ತಿತರರು ಆಗಮಿಸುವರು. ಸಂಸ್ಥೆಯ ಕಾರ್ಯದರ್ಶಿ ಲೋಹಿತ ನೆಲವಗಿ ಅಧ್ಯಕ್ಷತೆ ವಹಿಸುವರು. ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮದೊಂದಿಗೆ ಹಾಸ್ಯ ಕಲಾವಿದರಾದ ನಟ ಗಿಲ್ಲಿ, ನಟಿ ವಾಣಿಗೌಡ ಅವರಿಂದ ವಿಶೇಷ ಮನರಂಜನಾ ಕಾರ್ಯಕ್ರಮ ಜರುಗುವುದು ಎಂದು ಮುಖ್ಯ ಶಿಕ್ಷಕ ನಾಗರಾಜ ಯಂಡಿಗೇರಿ ತಿಳಿಸಿದ್ದಾರೆ.

### ಫೆ. 9ರಂದು ಪಂ. ಪುಟ್ಟರಾಜ ರೈತ ಸಂಘದ 4ನೇ ವರ್ಷದ ವಾರ್ಷಿಕೋತ್ಸವ

# ಅದ್ದೂರಿ ವಾರ್ಷಿಕೋತ್ಸವಕ್ಕೆ ಸಿದ್ಧತೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಡಾ. ಪಂ. ಪುಟ್ಟರಾಜ ರೈತ ಸಂಘದ 4ನೇ ವರ್ಷದ ವಾರ್ಷಿಕೋತ್ಸವವನ್ನು ಫೆಬ್ರವರಿ 9ರಂದು ಮುಂಜಾನೆ 10.30ಕ್ಕೆ ನಗರದ ಜಗದ್ಗುರು ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದ ಸಾನ್ನಿಧ್ಯವನ್ನು ವೀರೇಶ್ವರ ಪುಣ್ಯಾಶ್ರಮದ ಪರಮ ಪೂಜ್ಯ ಡಾ. ಕಲ್ಲಯ್ಯಜ್ಜನವರು, ತೋಂಟದಾರ್ಯ ಶ್ರೀಮಠದ ಜ. ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸಿಕೊಳ್ಳಲಿದ್ದಾರೆ ಎಂದು ಎಂ.ಪಿ. ಮುಳಗುಂದ ಮಾಹಿತಿ ನೀಡಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, 4ನೇ ವರ್ಷದ ವಾರ್ಷಿಕೋತ್ಸವವನ್ನು ಅದ್ದೂರಿಯಾಗಿ ನಡೆಸಲು ತೀರ್ಮಾನಿಸಲಾಗಿದ್ದು, ಜಿಲ್ಲೆಯ 249ರ ಹಳ್ಳಿಯ 2024ರ ಪ್ರೌಢಶಾಲೆಯಲ್ಲಿ ಶೇ. 90ಕ್ಕೂ ಹೆಚ್ಚು ಅಂಕ ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ, 20 ರೈತರಿಗೆ, 20 ಕಲಾವಿದರಿಗೆ, 14 ಪೂಜ್ಯರನ್ನೊಳಗೊಂಡಂತೆ ಅನೇಕ ಗಣ್ಯರನ್ನು ಸನ್ಮಾನಿಸಿ ಗೌರವಿಸಲಾಗುತ್ತಿದೆ. ಪ್ರಶಸ್ತಿಗಳು ದುಡ್ಡು ಕೊಟ್ಟು ಕೊಂಡುಕೊಳ್ಳುವುದಲ್ಲ, ಪೂಜ್ಯರಿಂದ ಪ್ರಶಸ್ತಿ




ಸ್ವೀಕರಿಸುವುದು ಒಂದು ದೊಡ್ಡ ಸಾಧನೆಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಡೂರು-ರಾಜೂರು-ಗದಗ ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಓಂಕಾರೇಶ್ವರ ಹಿರೇಮಠದ ಪೂಜ್ಯಶ್ರೀ ಫಕೀರೇಶ್ವರ ಶ್ರೀಗಳು, ಹೊಸಳ್ಳಿ ಸಂಸ್ಥಾನ ಮಠದ ಪೂಜ್ಯಶ್ರೀ ಜಗದ್ಗುರು ಅಭಿನವ ಬೂದೀಶ್ವರ ಶ್ರೀಗಳು, ಹರ್ಲಾಪುರ ಹಾಗೂ ಹಳ್ಳಿಗುಡಿಯ ಶ್ರೀಗುರು ಕೊಟ್ಟೂರೇಶ್ವರ ಮಠದ ಪೂಜ್ಯಶ್ರೀ ಅಭಿನವ ಡಾ. ಕೊಟ್ಟೂರೇಶ್ವರ ಶ್ರೀಗಳು, ನರಗುಂದ ಪುಣ್ಯಾರಣ್ಯ ಪತ್ರಿವನ ಮಠದ ಪೂಜ್ಯಶ್ರೀ ಡಾ. ಗುರು ಸಿದ್ಧವೀರ ಶಿವಯೋಗಿ ಶಿವಾಚಾರ್ಯ ಶ್ರೀಗಳು, ಸದ್ಗುರು ಮುಕ್ಕಣೇಶ್ವರ ಶ್ರೀಮಠದ ಪೂಜ್ಯಶ್ರೀ ಶಂಕರಾನಂದ ಸ್ವಾಮಿಗಳು ಸೇರಿದಂತೆ ಅನೇಕ ಪೂಜ್ಯರು ಉಪಸ್ಥಿತರಿರಲಿದ್ದಾರೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಗಂಗಾವತಿಯ ಶಾಸಕ ಜಿ. ಜನಾರ್ದನ ರೆಡ್ಡಿ, ನರಗುಂದ ಶಾಸಕ ಸಿ.ಸಿ. ಪಾಟೀಲ, ರೋಣ ಶಾಸಕ ಜಿ.ಎಸ್. ಪಾಟೀಲ, ಅಥಣಿ ಶಾಸಕ ಲಕ್ಷ್ಮಣ ಆಗಮಿಸಲಿದ್ದು, ವಿಶೇಷ ಅತಿಥಿಗಳಾಗಿ ಮಾಜಿ ಶಾಸಕ ಡಿ.ಆರ್. ಪಾಟೀಲ, ಮಾಜಿ ಸಚಿವ ಬಿ. ಶ್ರೀರಾಮುಲು, ಮಾಜಿ ಶಾಸಕರಾದ ಕಳಕಪ್ಪ ಬಂಡಿ, ರಾಮಣ್ಣ ಲಮಾಣಿ, ಜಿ.ಎಸ್. ಗಡ್ಡದೇವರಮಠ, ಬಿ.ಆರ್. ಯಾವಗಲ್, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಗಣ್ಯರಾದ ಶಿವಕುಮಾರ ರಾಮನಕೊಪ್ಪ ಮುಂತಾದವರು ಆಗಮಿಸಲಿದ್ದಾರೆ ಎಂದು ತಿಳಿಸಿದರು.

> ಒಕ್ಕಲಿಗ ಒಕ್ಕದಿದ್ದರೆ ಬಿಕ್ಕುವುದು ಜಗವೆಲ್ಲ, ಕೃಷಿ ಎಂದರೆ ಋಷಿ ಇದ್ದಂತೆ, ರೈತ ದೇಶದ ಬೆನ್ನೆಲುಬು ಎಂದು ಬಣ್ಣಿಸಲಾಗಿದೆ. ಆದರೆ, ಇಂದು ರೈತ ಸಂಕಷ್ಟದ ಸ್ಥಿತಿಯಲ್ಲಿದ್ದು, ಸಂಕಷ್ಟದಲ್ಲಿರುವ ರೈತನ ಸಮಸ್ಯೆಗಳಿಗೆ ಡಾ. ಪಂ. ಪುಟ್ಟರಾಜ ರೈತ ಸಂಘ ಬೆನ್ನೆಲುಬಾಗಿ ನಿಂತು ಅನೇಕ ರೈತಪರ ಹೋರಾಟ ಮಾಡುತ್ತಾ ಬಂದಿದೆ. ಈ ಸಂಘವು ರೈತರ ಪರವಾಗಿ ಇನ್ನೂ ಹೆಚ್ಚು ಹೋರಾಟ ಮಾಡಲಿ.
>
> -ಫಕ್ಕಿರೇಶ್ವರ ಶ್ರೀಗಳು. ಓಂಕಾರೇಶ್ವರ ಹಿರೇಮಠ.

### ಐಎಂಎನಿಂದ ನಿರಂತರ ವೈದ್ಯಕೀಯ ಶಿಕ್ಷಣ

# ಬೇಸಿಗೆಯಲ್ಲಿ ಚರ್ಮದ ಕಾಳಜಿ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಬೇಸಿಗೆಯ ಬಿಸಿಲಿನ ತಾಪಮಾನದಿಂದ ಚರ್ಮಕ್ಕೆ ಹಾನಿಯಾಗದಂತೆ ಸಂರಕ್ಷಣೆ, ಉಪಚಾರ ಹೊಂದಲು ವೈದ್ಯಕೀಯ ಕ್ಷೇತ್ರದಲ್ಲಿ ಹಲವಾರು ಹೊಸ ಹೊಸ ಆವಿಷ್ಕಾರಗಳಾಗಿವೆ ಎಂದು ಚರ್ಮ ತಜ್ಞೆ ಡಾ. ಸರೋಜಾ ಪಾಟೀಲ ಹೇಳಿದರು.

ಅವರು ಗದಗ ಐಎಂಎ ಸಭಾಂಗಣದಲ್ಲಿ ಭಾರತೀಯ ವೈದ್ಯಕೀಯ ಸಂಘ ಗದಗ ಹಾಗೂ




ಚರ್ಮರೋಗ ತಜ್ಞರ ಸಂಘದ ಆಶ್ರಯದಲ್ಲಿ ಏರ್ಪಡಿಸಿದ್ದ ನಿರಂತರ ವೈದ್ಯಕೀಯ ಶಿಕ್ಷಣ (ಸಿ.ಎಂ.ಇ) ಕಾರ್ಯಕ್ರಮದಲ್ಲಿ ಸನ್‌ಸ್ಕ್ರೀನ್ ವಿಷಯವಾಗಿ ಉಪನ್ಯಾಸ ನೀಡಿದರು.

ಚರ್ಮಕ್ಕೆ ಸಂಬಂಧಿಸಿದ ಸಮಸ್ಯೆಗಳಿದ್ದವರು ತಜ್ಞ ವೈದ್ಯರ ಸಲಹೆ ಪಡೆದು ಕ್ರೀಮ್, ಲೋಷನ್‌ಗಳನ್ನು ಬಳಸಬೇಕು. ಚರ್ಮದ ಮೇಲೆ ಪರಿಣಾಮ ಬೀರುವಂತಿರಬಾರದು. ಬೇಸಿಗೆಯ ಬಿಸಿಲಿನ ತಾಪಮಾನ ಹೆಚ್ಚಾಗಿದ್ದಾಗ ತಲೆ, ಮುಖ ಇತರ ಅಂಗಾಂಗಗಳ ಮೇಲೆ ಹಾನಿ ಆಗದಂತೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದರು.

ಚರ್ಮ ರೋಗ ತಜ್ಞೆ ಡಾ. ಅಪೂರ್ವ ರೇಶ್ಮೆ ಅವರು ಮೊಡವೆಗಳ ಚಿಕಿತ್ಸೆ ಕುರಿತು ಉಪನ್ಯಾಸ ನೀಡಿದರು. ಹದಿಹರೆಯದ ಮತ್ತು ಮಧ್ಯ ವಯಸ್ಕರರಲ್ಲಿ ಮೊಡವೆಗಳ ನಿರ್ವಹಣೆ ಹಾಗೂ ಕೈಗೊಳ್ಳಬೇಕಾದ ಕ್ರಮ ಕುರಿತು ತಿಳಿಸಿದರು.

ವೇದಿಕೆಯ ಮೇಲೆ ಉಪಸ್ಥಿತರಿದ್ದ ಹಿರಿಯ ತಜ್ಞ ವೈದ್ಯರಾದ ಡಾ. ಗಿರೀಶ್ ನಾಗರಾಳ, ಡಾ. ಪ್ರಕಾಶ ಕೊಲೋಳಗಿ, ಕಾರ್ಯದರ್ಶಿ ಡಾ. ತುಕಾರಾಮ ಸೋರಿ, ಡಾ. ಬಿಡಿನಹಾಳ, ಡಾ. ಪ್ರಶಾಂತಕುಮಾರ ದೇಸಾಯಿ ಅವರು ಚರ್ಚೆಯಲ್ಲಿ ಪಾಲ್ಗೊಂಡು ಮಾರ್ಗದರ್ಶನ ನೀಡಿದರು. ಕಾರ್ಯಕ್ರಮಕ್ಕೂ ಮುನ್ನ ಕೋವಿಡ್‌ದಲ್ಲಿ ನಿಧನರಾದ ವೈದ್ಯರಿಗೆ ಮೇಣಬತ್ತಿ ಬೆಳಗುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಡಾ. ಬಿಡಿನಹಾಳರು ಕೋವಿಡ್ ಸಂದರ್ಭದಲ್ಲಿ ವೈದ್ಯರ ಸೇವೆಯನ್ನು ಶ್ಲಾಘಿಸಿ ನಿಧನರಾದ ವೈದ್ಯರ ಗುಣಗಾನ ಮಾಡಿ ಮಾತನಾಡಿದರು. ಡಾ. ಕರೂರ ಅವರ ನೆನಪಿನಲ್ಲಿ ಡಾ. ಸೋನಿಯಾ ಕರೂರ ಅವರನ್ನು ಗೌರವಿಸಲಾಯಿತು.

ಕಾರ್ಯದರ್ಶಿ ಡಾ. ತುಕಾರಾಮ ಸೋರಿ ನಿರೂಪಿಸಿ ವಂದಿಸಿದರು.

### ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವವನ್ನು ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಮಹಾತ್ಮರ ಆಶೀರ್ವಾದದಿಂದ ಸುಖಮಯ ಜೀವನ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಮ್ಮ ಜೀವನ ಸುಖಮಯವಾಗಿ ಸಾಗಬೇಕಾದರೆ ನಮಗೆ ಸಂತರ, ಶರಣರ, ಮಹಾತ್ಮರ ಆಶೀರ್ವಾದ ಬೇಕು. ಮಹಾತ್ಮರ ಕೃಪೆಯಿಲ್ಲದೆ ಯಾವ ಕಾರ್ಯವೂ ಸಾಧ್ಯವಿಲ್ಲ ಎಂದು ಕಾನೂನು, ಸಂಸದೀಯ, ಪ್ರವಾಸೋದ್ಯಮ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.



ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶ್ರೀ ವೀರಪ್ಪಜ್ಜನವರ ಮಠದಲ್ಲಿ ಜಾತಿ, ಮತ, ಪಂಥಗಳ ಭೇದವಿಲ್ಲ ಎಂಬುದನ್ನು ತಿಳಿದು ನನಗೆ ತುಂಬಾ ಸಂತೋಷವಾಯಿತು. ಇಂತಹ ಮಠಗಳಿಂದಲೇ ನಮ್ಮಲ್ಲಿ ಇನ್ನೂ ಸಾಮರಸ್ಯ ಉಳಿದುಕೊಂಡಿದೆ ಎಂದು ಹೇಳಿದರು.

ಶ್ರೀ ವೀರಪ್ಪಜ್ಜನವರ ಹೇಳಿಕೆಯನ್ನು ಅರ್ಥ ಮಾಡಿಕೊಳ್ಳಲು ನಮಗೆ ಇನ್ನೂ ಸಾಧ್ಯವಾಗಿಲ್ಲ. ಅವರ ನುಡಿಗಳಲ್ಲಿ ಅಷ್ಟೊಂದು ಅರ್ಥ ಮತ್ತು ಶಕ್ತಿ ಇದೆ. ಇಲ್ಲಿನ ಅಬ್ಬಿಗೇರಿ ರಸ್ತೆಯಲ್ಲಿರುವ ಚಂದ್ರಮೌಳೇಶ್ವರ ಗುಡಿಯಲ್ಲಿ ಶ್ರೀ ವೀರಪ್ಪಜ್ಜನವರು ಕೆಲವು ಕಾಲ ವಾಸವಾಗಿದ್ದರು. ಈ ಶತಮಾನೋತ್ಸವದ ಸಂದರ್ಭದಲ್ಲಿ ಶ್ರೀ ವೀರಪ್ಪಜ್ಜನವರು ವಾಸಿಸಿದ್ದ ಈ ದೇವಸ್ಥಾನವನ್ನು ಸರಕಾರದ ಪ್ರಾಚ್ಯವಸ್ತು ಇಲಾಖೆಯ ಸುಪರ್ದಿಗೆ ತೆಗೆದುಕೊಂಡು ಅದನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಲಾಗುವದೆಂದು ಸಚಿವರು ಘೋಷಿಸಿದರು.

ಪುಣ್ಯಾರಾಧನೆಯ ಶತಮಾನೋತ್ಸವದ ಸ್ಮರಣ ಸಂಚಿಕೆ 'ಹಠಯೋಗಿ'ಯನ್ನು ಉದಯವಾಣಿ ಪತ್ರಿಕೆ ಹೊರತಂದ ವಿಶೇಷ ಸಂಚಿಕೆಯನ್ನು ಸಚಿವರು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಹಾಲಕೆರೆಯ ಮುಪ್ಪಿನ ಬಸವಲಿಂಗ ಸ್ವಾಮೀಜಿ, ಭೈರನಹಟ್ಟಿಯ ಶಾಂತಲಿಂಗ ಸ್ವಾಮೀಜಿ, ಅಬ್ಬಿಗೇರಿ ಹಿರೇಮಠದ ಶ್ರೀ ವೀರಭದ್ರ ಶಿವಾಚಾರ್ಯರು, ಡಾ. ವಿಶ್ವನಾಥ ಸ್ವಾಮೀಜಿ, ಜಿ.ಎಸ್. ಪಾಟೀಲ, ಮುಖಂಡ ಟಿ.ಈಶ್ವರ, ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ. ಎಂ.ಸಿ. ಚಪ್ಪನಮಠ, ಮುಖಂಡ ಮಿಥುನ ಪಾಟೀಲ, ಡಾ. ಕೆ.ಬಿ. ಧನ್ನೂರ, ಸಂಪಾದಕರಾದ ಬಸವರಾಜ ಜಾಲೀಹಾಳ, ದಿಲೀಪ ಮುಗಳಿ ಮುಂತಾದವರು ಉಪಸ್ಥಿತರಿದ್ದರು.

ಶಿವನಗೌಡ ಪಾಟೀಲ ಸ್ವಾಗತಿಸಿದರು. ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ, ಡಾ. ಕಲ್ಲಯ್ಯ ಹಿರೇಮಠ ನಿರೂಪಿಸಿದರು.

> ಶ್ರೀ ವೀರಪ್ಪಜ್ಜನವರನ್ನು ಹುಚ್ಚೀರಪ್ಪಜ್ಜ ಎಂದು ಕರೆಯುವುದನ್ನು ಇಂದಿನಿಂದ ಬಿಡುವ ಸಂಕಲ್ಪವನ್ನು ಎಲ್ಲರೂ ಮಾಡಬೇಕು. ಅಷ್ಟೇ ಅಲ್ಲದೆ ಇನ್ನು ಮುಂದೆ ಹುಚ್ಚೀರಪ್ಪಜ್ಜ ಎಂದು ಕರೆದವರಿಗೆ ದಂಡವನ್ನು ವಿಧಿಸಬೇಕೆಂದು ಸಚಿವ ಎಚ್.ಕೆ. ಪಾಟೀಲ ಪ್ರತಿಪಾದಿಸಿದರು.

## ಬಂಧನ ವಾರಂಟ್ ಹಿಂಪಡೆಯುವಂತೆ ಕೇರಳ ನ್ಯಾಯಾಲಯಕ್ಕೆ ಬಾಬಾ ರಾಮದೇವ್ ಅರ್ಜಿ

■ ವಿಜಯಸಾಕ್ಷಿ ಸುದ್ದಿ, ಪಾಲಕ್ಕಾಡ್

ಪತಂಜಲಿ ವಿರುದ್ಧದ ದಾರಿತಪ್ಪಿಸುವ ಜಾಹೀರಾತು ಪ್ರಕರಣದಲ್ಲಿ ತಮ್ಮ ವಿರುದ್ಧ ಜಾಮೀನು ರಹಿತ ಬಂಧನ ವಾರಂಟ್ ಗಳನ್ನು ಹಿಂಪಡೆಯುವಂತೆ ಕೋರಿ ಬಾಬಾ ರಾಮದೇವ್ ಮತ್ತು ಆಚಾರ್ಯ ಬಾಲಕೃಷ್ಣ ಕೇರಳದ ವಿಚಾರಣಾ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದಾರೆ ಎಂದು 'ಬಾರ್ ಅಂಡ್ ಬೆಂಚ್' ವರದಿ ಮಾಡಿದೆ.

ಈ ತಿಂಗಳ ಆರಂಭದಲ್ಲಿ ನಿಗದಿಯಾಗಿದ್ದ ನ್ಯಾಯಾಲಯದ ವಿಚಾರಣೆಗೆ ಹಾಜರಾಗಲು ಅವರು ವಿಫಲರಾದ ಕಾರಣ ಬಂಧನ ವಾರಂಟ್ ಹೊರಡಿಸಲಾಗಿದೆ.

ಆರೋಪಿಗಳು ನ್ಯಾಯಾಲಯದ ವಿಚಾರಣೆಗಳಿಗೆ ವೈಯಕ್ತಿಕವಾಗಿ ಹಾಜರಾಗುವುದರಿಂದ ಮತ್ತು ಬದಲಿಗೆ ಅವರ ವಕೀಲರಿಂದ ಪ್ರತಿನಿಧಿಸಲ್ಪಡುವುದರಿಂದ ವಿನಾಯಿತಿ ನೀಡುವ ವಿಚಾರಣಾ ನ್ಯಾಯಾಲಯಗಳ ವಿವೇಚನೆಗೆ ಸಂಬಂಧಿಸಿದಂತೆ ರಾಮದೇವ್ ಮತ್ತು ಬಾಲಕೃಷ್ಣ ಅಪರಾಧ ಪ್ರಕ್ರಿಯಾ ಸಂಹಿತೆಯ (ಸಿಆರ್‌ಪಿಸಿ) ಸೆಕ್ಷನ್ 205 ರ ಅಡಿಯಲ್ಲಿ ಅರ್ಜಿ ಸಲ್ಲಿಸಿದ್ದಾರೆ.

## ನಾಮ ನಿರ್ದೇಶಿತ ಸದಸ್ಯರಾಗಿ ನಿರ್ಮಲಾ ತರವಾಡೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಗದಗ ಹೊರಡಿಸಿದ ಆದೇಶದ ಮೇರೆಗೆ ಮುಂಡರಗಿಯ ನಿರ್ಮಲ ವಿವಿಧೋದ್ದೇಶಗಳ ಸೇವಾ ಸಂಸ್ಥೆಯ ಅಧ್ಯಕ್ಷರಾದ ನಿರ್ಮಲಾ ಗಣಪತಿ ತರವಾಡೆ ಇವರನ್ನು ಆಂತರಿಕ ದೂರು ನಿವಾರಣಾ ಸಮಿತಿಗೆ ನಾಮ ನಿರ್ದೇಶಿತ ಸದಸ್ಯರಾಗಿ ಆಯ್ಕೆ ಮಾಡಲಾಗಿದೆ ಎಂದು ಗದಗ ಜಿಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

ಕೆಲಸದ ಸ್ಥಳದಲ್ಲಿ ಮಹಿಳೆಯರಿಗೆ ಲೈಂಗಿಕ ಕಿರುಕುಳ ತಡೆಗಟ್ಟಲು ಆಂತರಿಕ ದೂರು ನಿವಾರಣಾ ಸಮಿತಿ ರಚಿಸಿ ವಿಚಾರಣೆಯ ಮುಖಾಂತರ ಸಮಸ್ಯೆ ನಿವಾರಿಸುವ ಜವಾಬ್ದಾರಿಯನ್ನು ಸಮಿತಿಗೆ ನೀಡಿ ಸೇವೆ ಮಾಡಲು ಅವಕಾಶ ನೀಡಲಾಗಿದೆ.

ನಿರ್ಮಲಾ ತರವಾಡೆಯವರು ಸತತ 15 ವರ್ಷಗಳಿಂದ ಸಮಾಜ ಸೇವೆಯಲ್ಲಿ ನಿರತರಾಗಿದ್ದು, ಹಲವಾರು ಮಹಿಳೆಯರ ಬದುಕಿಗೆ ನೆರವಾಗಿದ್ದಾರೆ. ಶಿಕ್ಷಣ, ಕೌಶಲ್ಯ, ಕ್ರೀಡೆ, ಸಾಹಿತ್ಯ, ಕಲೆ ಇತ್ಯಾದಿ ಕ್ಷೇತ್ರದ ಬೆಳವಣಿಗೆಗಾಗಿ ತಮ್ಮ ಸಂಸ್ಥೆ ವತಿಯಿಂದ ಕಾರ್ಯಕ್ರಮ, ತರಬೇತಿ ಶಿಬಿರ ಆಯೋಜಿಸಿದ್ದಾರೆ.

ಇವರ ಸೇವೆ ನಿರಂತರವಾಗಿ ಸಾಗಲಿ ಎಂದು ನಿರ್ಮಲಾ ಸೇವಾ ಸಂಸ್ಥೆಯ ಕಾರ್ಯದರ್ಶಿ ಬಸವರಾಜ ನೆಲಜೇರಿ, ಬಸವರಾಜ ಜಾಧವ, ಗೀತಾ ಜಾಧವ, ಮಂಜುನಾಥ ಪಟ್ಟಣಶೆಟ್ಟಿ, ಸಾಹಿತಿಗಳಾದ ಮರುಳಸಿದ್ದಪ್ಪ ದೊಡ್ಡಮನಿ, ಭಾಗ್ಯ ಹುರಕಡ್ಲಿ, ರಮಾ ಚಿಗಟೇರಿ, ಶಿವಲೀಲಾ, ಕಸ್ತೂರಿ ವೀರಣ್ಣ ಕಡಗದ. ಗಣೇಶಗೌಡ ಪಾಟೀಲ, ಹುಚ್ಚಿರಪ್ಪ ಈಟಿ, ಮಹಾಲಕ್ಷ್ಮೀ, ಅಶ್ವಿನಿ, ಸವಿತಾ ಹಂದ್ರಾಳ, ನವರಸ ಕಲಾ ಸಂಘ ಬೆಟಗೇರಿ, ಶ್ರೀ ಗಣೇಶ ಸೇವಾ ಸಂಸ್ಥೆ ಬೆಟಗೇರಿ ಇವರು ಅಭಿನಂದನೆ ಸಲ್ಲಿಸಿದ್ದಾರೆ.


ಕರ್ನಾಟಕ ಸರ್ಕಾರ

## ಗ್ರಾಮ ಪಂಚಾಯತ ಕಾರ್ಯಾಲಯ ಕುರ್ತಕೋಟಿ

ತಾಲೂಕ : ಗದಗ e-mail : kurtakoti.gad.gdg@gmail.com ಜಿಲ್ಲಾ : ಗದಗ

ನಂ: ಗ್ರಾ.ಪಂ.ಕುರ್ತಕೋಟಿ/ಟೆಂಡರ/2024-25/01 ದಿನಾಂಕ: 06-02-2025

**ಃ ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ ಃ**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತಿಗೆದಾರರು/ಸರಬರಾಜುದಾರರು ರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 02 ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2024-25ನೇ ಸಾಲಿನ MGNREGA ಯೋಜನೆ ಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರರು/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ https://kppp.karnataka.gov.in ಮುಖಾಂತರ ಭಾಗವಹಿಸ ಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

| ಕ್ರ.ಸಂ. | ಇಂಡೆಂಟ್ ನಂಬರ | ಟೆಂಡರಿಗಿಟ್ಟ ಮೊತ್ತ |
|---|---|---|
| 1 | RDPR/2024-25/IND7384 | ರೂ. 7,17,239.15 |
| 2 | RDPR/2024-25/IND7386 | ರೂ.11,94,843.92 |

**ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ** : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ನಂತೆ, ಇ.ಎಂ.ಡಿ. ಸಂಬಂದಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟ್‌ನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ:-07-02-2025 ರಿಂದ 15-02-2025 ರಂದು 16.30 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ: 17-02-2025 ರಂದು 11.30 ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ/-
**ಪಂಚಾಯತ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತ ಕುರ್ತಕೋಟಿ**
ತಾಲೂಕ: ಗದಗ ಜಿಲ್ಲಾ : ಗದಗ.



## ಕರ್ನಾಟಕ ನೀರಾವರಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಅಭಿಯಂತರವರ ಕಛೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ,
ಸಿಂಗಟಾಲೂರು ಏತ ನೀರಾವರಿ ಯೋಜನೆ, ವಿಭಾಗ ನಂ.1, ಮುಂಡರಗಿ, ಗದಗ ಜಿಲ್ಲೆ.
Ph. No. 08371-295016 e-mail: eeslis1mdg@gmail.com

**ಅಲ್ಪಾವಧಿ ಟೆಂಡರ್ ಪ್ರಕಟಣೆ (ಮರು ಟೆಂಡರ್)**
**(ONLY THROUGH "e-Procurement" SYSTEM)**

**ಉಲ್ಲೇಖ: 1.ಈ ಕಛೇರಿ ಟೆಂಡರ್ ಪ್ರಕಟಣೆ ಪತ್ರ ಸಂಖ್ಯೆ: 1599/2024-25 ದಿನಾಂಕ: 04.02.2025**
**2.ಈ ಕಛೇರಿ ಟೆಂಡರ್ ಪ್ರಕಟಣೆ ಪತ್ರ ಸಂಖ್ಯೆ: 1600/2024-25 ದಿನಾಂಕ: 04.02.2025**

ಸಿಂಗಟಾಲೂರು ಏತ ನೀರಾವರಿ ಯೋಜನೆಯ ಎಡದಂಡೆ ಒಳಹರಿವು ಕಾಲುವೆ ಪಕ್ಕದಲ್ಲಿರುವ ಶ್ರೀ. ಯೋಗಿ ಮೇಮನ ಪ್ರೌಢಶಾಲೆಗೆ ತಡೆಗೋಡೆ ನಿರ್ಮಿಸುವ ಕಾಮಗಾರಿಗೆ ಉಲ್ಲೇಖ (1) ರನ್ವಯ ಹಾಗೂ ಪುನರ್‌ವಸತಿ ಮತ್ತು ಪನರ್‌ನಿರ್ಮಾಣ ಉಪವಿಭಾಗ ಕಛೇರಿ ವ್ಯಾಪ್ತಿಯಲ್ಲಿ ಬರುವ ಕಾಲುವೆ ಅರಣ್ಯ ತಿರುವಳಿಗಾಗಿ Consultancy ಸೇವೆ ಪಡೆಯುವ ಕಾಮಗಾರಿಗೆ ಉಲ್ಲೇಖ (2) ರನ್ವಯ ದ್ವಿ-ಲಕೋಟೆ ಪದ್ಧತಿಯಲ್ಲಿ ಮರು ಅಲ್ಪಾವಧಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ.

| Sl. No | Name of work | Amount put to tender (Rs. in Lakhs) | EMD (in Rs.) |
|---|---|---|---|
| 1 | Construction of Compound wall for the main canal adjacent to the Shri Yogi Vemana High School Honna-Hammigi. **(Indent No KNNL/2024-25/BD/WORK_INDENT2054/CALL-2)** | **14.86** (Including GST) | **38000/-** |
| 2 | Consultancy services for obtaining Wildlife and Forest Clarence for Diversion of 1.42 Ha in forest land in Sy. No. 161 of Hammigi Village and Sy. No. 134 of Singataluru Village in Mundaragi Taluka Gadag District. **(Indent No. KNNL/2023-24/OW/WORK_INDENT1128/CALL-4)** | **9.97** (Including GST) | **25000/-** |

ಇನ್ನುಳಿದಂತೆ, ಸದರಿ ಟೆಂಡರಿಗೆ ಸಂಬಂಧಿಸಿದ ಷರತ್ತು/ನಿಯಮಾವಳಿಗಳ ಮಾಹಿತಿಯನ್ನು ಕೆಳಗೆ ಸಹಿ ಮಾಡಿರುವ ಅಧಿಕಾರಿಯವರ ಕಛೇರಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ ಹಾಗೂ **ದಿನಾಂಕ:05-02-2025ರ** ನಂತರ **"https://kppp.karnataka.gov.in"** ವೆಬ್‌ಸೈಟ್‌ನಲ್ಲಿ ಟೆಂಡರ್ ಡಾಕ್ಯೂಮೆಂಟ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಬಿಡ್‌ನ್ನು ಸಲ್ಲಿಸಬಹುದಾಗಿರುತ್ತದೆ. ಸದರಿ ಕಾಮಗಾರಿಯ ಟೆಂಡರ್‌ಗೆ ಬಿಡ್‌ನ್ನು ಸಲ್ಲಿಸಲು ಕೊನೆಯ **ದಿನಾಂಕ: 19-02-2025** ಎಂದು ಮತ್ತು ಟೆಂಡರ್ ತಾಂತ್ರಿಕ ಬಿಡ್‌ನ್ನು ತೆರೆಯುವ **ದಿನಾಂಕ: 21-02-2025** ಎಂದು ನಿಗದಿಪಡಿಸಿದೆ. ಇನ್ನಿತರೆ ಹೆಚ್ಚಿನ ಮಾಹಿತಿಯನ್ನು **e-procurement Helpdesk Phone No's: +91-80-46010000, +91-80-68948777** ಅನ್ನು ಸಂಪರ್ಕಿಸಿ ಪಡೆಯಬಹುದಾಗಿದೆ. ನಿಬಂಧನೆಗೊಳಪಟ್ಟ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು. ಟೆಂಡರ್‌ಗಳನ್ನು ಸ್ವೀಕರಿಸುವ ಅಧಿಕಾರ ಪಡೆದಿರುವ ಅಧಿಕಾರಿಯು ಎಲ್ಲಾ ಅಥವಾ ಯಾವುದೇ ಟೆಂಡರ್‌ನ್ನು ಕಾರಣ ನೀಡದೆ ತಿರಸ್ಕರಿಸುವ ಅಧಿಕಾರಿವನ್ನು ಹೊಂದಿರುತ್ತಾರೆ.

ಸಹಿ/-
**ಕಾರ್ಯಪಾಲಕ ಅಭಿಯಂತರರು,**
**ಸಿಂಗಟಾಲೂರು ಏತ ನೀರಾವರಿ ಯೋಜನೆ,**
**ನಂ. 1 ವಿಭಾಗ, ಕರ್ನಾಟಕ ನೀರಾವರಿ ನಿಗಮ ನಿಯಮಿತ,**
**ಮುಂಡರಗಿ, ಗದಗ ಜಿಲ್ಲೆ.**

ವಾ.ಸಾ.ಇ/ಗದಗ/595/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka